# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 42 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಗುರುವಾರ ದಿನಾಂಕ : 20-08-2026 ಪುಟ : 04 ಬೆಲೆ : 2-00


## ದೆಹಲಿ : ಸಿಎನ್‌ಜಿ ಸಿಲಿಂಡರ್ ಸ್ಫೋಟ: ಒಬ್ಬರ ಸಾವು, ಆರು ಮಂದಿಗೆ ಗಂಭೀರ ಗಾಯ!



ನವದೆಹಲಿ: ದೆಹಲಿಯ ಇಂಧನ ಕೇಂದ್ರವೊಂದರಲ್ಲಿ ಟ್ರಕ್‌ನ ಸಿಎನ್‌ಜಿ ಸಿಲಿಂಡರ್‌ಗೆ ಅನಿಲ ತುಂಬಿಸುವಾಗ ಸಂಭವಿಸಿದ ಸ್ಫೋಟದಲ್ಲಿ ಒಬ್ಬರು ಮೃತಪಟ್ಟಿದ್ದು, ಆರು ಮಂದಿ ಗಾಯಗೊಂಡಿದ್ದಾರೆ.

ದೆಹಲಿಯ ಟಿಕ್ರಿ ಕಲನ್ ಮೆಟ್ರೋ ನಿಲ್ದಾಣದ ಬಳಿ ಈ ಘಟನೆ ನಡೆದಿದೆ. ಮೃತಪಟ್ಟ ವ್ಯಕ್ತಿಯನ್ನು ಪಶ್ಚಿಮ ದೆಹಲಿಯ ಬಾಬಾ ಹರಿದಾಸ್ ಕಾಲೋನಿಯ ನಿವಾಸಿ ಮನೀಶ್ ಎಂದು ಗುರುತಿಸಲಾಗಿದೆ. ಅವರಿಗೆ 25 ವರ್ಷ ವಯಸ್ಸಾಗಿತ್ತು.

ದೆಹಲಿಯ ಹೊರವಲಯ ಡಿಸಿಪಿಅವರ ಪ್ರಕಾರ, ಗಾಯಗೊಂಡಿರುವ ಆರು ಮಂದಿಯ ಸ್ಥಿತಿ ಗಂಭೀರವಾಗಿದೆ. ಘಟನಾ ಸ್ಥಳದಲ್ಲಿ ಪೊಲೀಸ್ ಮತ್ತು ಅಗ್ನಿಶಾಮಕ ದಳದ ಸಿಬ್ಬಂದಿಯ ದೊಡ್ಡ ತಂಡಗಳನ್ನು ನಿಯೋಜಿಸಲಾಗಿದೆ.

ಟ್ರಕ್‌ನ ಸಿಎನ್‌ಜಿ ಸಿಲಿಂಡರ್‌ಗೆ ಅನಿಲ ತುಂಬಿಸುತ್ತಿದ್ದ ವ್ಯಕ್ತಿಯೇ ಈ ಅಪಘಾತದಲ್ಲಿ ಮೃತಪಟ್ಟಿದ್ದಾರೆ. ಅವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಡಿಸಿಪಿ ಹೇಳಿದ್ದಾರೆ. ಸ್ಫೋಟದ ಸಮಯದಲ್ಲಿ ಹತ್ತಿರದಲ್ಲೇ ನಿಂತಿದ್ದು ಗಾಯಗೊಂಡ ಆರು ಮಂದಿಯನ್ನು ಚಿಕಿತ್ಸೆಗಾಗಿ ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ಅಗ್ನಿಶಾಮಕ ದಳದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಅಭಿಮನ್ಯು ಇಲ್ಲದ ದಸರಾ; ಈ ಬಾರಿ ಹೊರೋದ್ಯಾರು ಅಂಬಾರಿ?

ಬೆಂಗಳೂರು: ವಿಶ್ವವಿಖ್ಯಾತ ನಾಡಹಬ್ಬ, ಮೈಸೂರು ದಸರಾ ಉತ್ಸವದಲ್ಲಿ ಅಂಬಾರಿ ಹಾಗೂ ಅಂಬಾರಿ ಹೊರುವ ಆನೆ, ನಿಶಾನೆ ಆನೆಗಳು ಎಲ್ಲರ ಕೇಂದ್ರಬಿಂದುವಾಗಿರಲಿವೆ.

2020 ರಿಂದ ಅಭಿಮನ್ಯು ಆನೆ ಅಂಬಾರಿ ಹೊರುತ್ತಿತ್ತು. ಆದರೆ ಈ ಬಾರಿಯಿಂದ ಅಭಿಮನ್ಯು ಅಂಬಾರಿ ಹೊರುವುದಿಲ್ಲ. ಅರಣ್ಯ ಇಲಾಖೆ ಈ ಬಾರಿಯ ದಸರಾ ಅಂಬಾರಿ ಹೊರುವುದಕ್ಕೆ ಹೊಸ ಆನೆಯ ಶೋಧನೆಯಲ್ಲಿ ತೊಡಗಿದೆ.

ಮೈಸೂರು ದಸರಾ ಉತ್ಸವಕ್ಕೆ 12 ಆನೆಗಳ ಪಟ್ಟಿಯನ್ನು ಪ್ರಕಟಿಸಲಾಗಿದ್ದು ಅಭಿಮನ್ಯು ಆನೆಯನ್ನು ಪಟ್ಟಿಯಿಂದ ಕೈಬಿಡಲಾಗಿದೆ. ಧನಂಜಯ, ಮಹೇಂದ್ರ, ಸುಗ್ರೀವ ಅಥವಾ ಪ್ರಶಾಂತ ಈ 4 ಆನೆಗಳ ಪೈಕಿ 1 ಈ ಬಾರಿ ತಾಯಿ ಚಾಮುಂಡಿ ಇರುವ ಚಿನ್ನದ ಅಂಬಾರಿಯನ್ನು ಹೊರಲಿದೆ.

60 ವರ್ಷ ತುಂಬಿದ ಹಿನ್ನೆಲೆಯಲ್ಲಿ ಈ ಬಾರಿ ಅಂಬಾರಿ ಹೊರಲು ಅಭಿಮನ್ಯುವನ್ನು ಪರಿಗಣಿಸಿಲ್ಲ ಎಂದು ತಿಳಿಸಲಾಗಿದೆ. ಆ.26ರಂದು ದಸರಾ ಗಜಪಯಣ ಆರಂಭವಾಗಲಿದ್ದು, ಮೊದಲ ತಂಡದಲ್ಲಿ ಧನಂಜಯ, ಮಹೇಂದ್ರ, ಏಕಲವ್ಯ, ಪ್ರಶಾಂತ, ಗೋಪಿ, ಶ್ರೀರಾಮ, ಸುಗ್ರೀವ, ಲಕ್ಷ್ಮೀ ಹಾಗೂ ಕಾವೇರಿ ಆನೆಗಳು ಆಗಮಿಸಲಿವೆ.

ದಸರಾದ ಅಚ್ಚುಮೆಚ್ಚಿನ ಕ್ಯಾಪ್ಟನ್ ಅಭಿಮನ್ಯುಗೆ ದಸರಾದಲ್ಲಿ ಬರೋಬ್ಬರಿ 25 ವರ್ಷಗಳ ಇತಿಹಾಸವಿದೆ. ತುರ್ತು ಕಾರಣಗಳಿಗಾಗಿ ಬಲಿಷ್ಠ ಆನೆಗಳಾದ ಭೀಮ ಮತ್ತು ಹರ್ಷನನ್ನು ಅರಣ್ಯ ಇಲಾಖೆಯು ಮೀಸಲು ಪಡೆಯಾಗಿ ತಂಡಕ್ಕೆ ಸೇರಿಸಿಕೊಂಡಿದೆ.



# ನಕಲಿ ಔಷಧ ದಂಧೆ-ದುಬೈ ಕಿಂಗ್‌ಪಿನ್ ಸಂಪರ್ಕ: ಖಾದರ್



ಬೆಂಗಳೂರು ದಕ್ಷಿಣ ಜಿಲ್ಲೆ ರಾಮನಗರದಲ್ಲಿ ಬಹುರಾಷ್ಟ್ರೀಯ ಔಷಧ ಕಂಪನಿಗಳ ಲೇಬಲ್‌ಗಳನ್ನು ಬಳಸಿರುವ ನಕಲಿ ಔಷಧಗಳ ದಂಧೆ ಪತ್ತೆಯಾಗಿದ್ದು, 5 ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ನಕಲಿ ಔಷಧಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಬುಧವಾರ ತಿಳಿಸಿದ್ದಾರೆ.

ಅಂತಾರಾಜ್ಯ ತನಿಖೆಗೆ ಆಗ್ರಹಿಸಿರುವ ಅವರು, ದೇಶದ ಇತರ ಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಕಲಿ ಔಷಧ ತಯಾರಿಕಾ ಘಟಕಗಳೊಂದಿಗೆ ಈ ದಂದ- ೆಗೆ ಸಂಪರ್ಕ ಇರುವ ಸಾಧ್ಯತೆ ಪ್ರಾಥಮಿಕ ತನಿಖೆಯಲ್ಲಿ ಬೆಳಕಿಗೆ ಬಂದಿದೆ ಎಂದು ಹೇಳಿದ್ದಾರೆ.

ಈ ದಂಧೆಯ ಪ್ರಮುಖ ನಿರ್ವಾಹಕ ದುಬೈನಲ್ಲಿ ಇದ್ದಾನೆ ಎಂದು ತಿಳಿದುಬಂದಿದ್ದು, ದಂಧೆಯ ಹಿಂದೆ ಇರುವ ಶಂಕಿತ ಜಾಲದ ತನಿಖೆಗಾಗಿ ಕೇಂದ್ರ ಸರ್ಕಾರದ ಮಧ್ಯಸ್ಥಿಕೆ ಕೋರಲು ರಾಜ್ಯ ಸರ್ಕಾರ ಮುಂದಾಗಿದೆ. ದೇಶಾದ್ಯಂತ ನಕಲಿ ಔಷಧಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ.

ನಿನ್ನೆ ಸಾಯಂಕಾಲ ಬೀಟ್ ಪೊಲೀಸರಿಗೆ ಈ ದಂಧೆಯ ಬಗ್ಗೆ ಮಾಹಿತಿ ಲಭಿಸಿದ ಬಳಿಕ ಪ್ರಕರಣ ಬೆಳಕಿಗೆ ಬಂದಿದೆ. ಮಾಹಿತಿ ದೊ- ರೆತ ತಕ್ಷಣ ಔಷಧ ನಿಯಂತ್ರಣ ಇಲಾಖೆ ಹಾಗೂ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಆಯುಕ್ತಾಲಯದ ಅಧಿಕಾರಿಗಳು ಬಿಡದಿಯಲ್ಲಿರುವ ಫಾರ್ಮ್‌ಹೌಸ್‌ವೊಂದರ ಮೇಲೆ ದಾಳಿ ನಡೆಸಿದರು. ಇಲ್ಲಿ ನಕಲಿ ಔಷಧಗಳನ್ನು ಸಂಗ್ರಹಿಸಿ, ಮರುಪ್ಯಾಕಿಂಗ್ ಮಾಡಿ ಔಷಧ ಮಳಿಗೆಗಳು ಹಾಗೂ ಆಸ್ಪತ್ರೆಗಳಿಗೆ ಪೂರೈಸಲಾಗುತ್ತಿತ್ತು ಎಂದು ಆರೋಪಿಸಲಾಗಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಭುದೇವ್ ಎಂಬಾತನನ್ನು ಬಂಧಿಸಲಾಗಿದೆ. ರಾಮನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನೇತೃತ್ವದಲ್ಲಿ ತನಿಖೆ ನಡೆಯುತ್ತಿದೆ.

ತೆಲಂಗಾಣ, ಹಿಮಾಚಲ ಪ್ರದೇಶ ಸೇರಿದಂತೆ ದೇಶದ ಇತರ ಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಕಲಿ ಔಷಧ ತಯಾರಿಕಾ ಘಟಕಗಳೊಂದಿಗೆ ಈ ದಂದ- ೆಗೆ ಸಂಪರ್ಕ ಇರುವ ಸಾಧ್ಯತೆ ಪ್ರಾಥಮಿಕ ತನಿಖೆಯಲ್ಲಿ ಕಂಡುಬಂದಿದೆ ಎಂದು ಹೇಳಿದರು.

ಆರೋಪಿಗಳು ಅತ್ಯಂತ ಕಡಿಮೆ ಬೆಲೆಗೆ ಔಷಧಗಳನ್ನು ಖರೀದಿಸಿ, ಬಹುರಾಷ್ಟ್ರೀಯ ಔಷಧ ಕಂಪನಿಗಳ ಹೆಸರು ಮತ್ತು ಲೇಬಲ್‌ಗಳನ್ನು ಅಂಟಿಸಿ ಮರುಪ್ಯಾಕಿಂಗ್ ಮಾಡುತ್ತಿದ್ದರು. ಬಳಿಕ ಅವುಗಳನ್ನು ಆಸ್ಪತ್ರೆಗಳು ಮತ್ತು ಔಷಧ ಮಳಿಗೆಗಳಿಗೆ ಪೂರೈಸುತ್ತಿದ್ದರು ಎಂದು ಆರೋಪಿಸಲಾಗಿದೆ.

ಐಸಿಯುಗಳಲ್ಲಿ ಬಳಸುವ ಮಾತ್ರೆಗಳನ್ನೂ ನಕಲು ಮಾಡಿ ಬಹುರಾಷ್ಟ್ರೀಯ ಕಂಪನಿಗಳ

2ನೇ ಪುಟಕ್ಕೆ...

## ಸಚಿವ ನಾಗೇಂದ್ರ ರಾಜೀನಾಮೆಗೆ ಆಗ್ರಹ

### ಬಿಜೆಪಿಯಿಂದ ಹೊಸಪೇಟೆಯಲ್ಲಿ ಬೃಹತ್ ಧರಣಿ




ಹೊಸಪೇಟೆ.ಆ.19 ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣವನ್ನು ದುರುಪಯೋಗಪಡಿಸಿಕೊಂಡ ಆರೋಪಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ತಹಶೀಲ್ದಾರರ ಕಛೇರಿ ಎದುರು ಬಿಜೆಪಿ ಕಾರ್ಯಕರ್ತರು ನಡೆಸುತ್ತಿರುವ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಮೂರನೇ ದಿನಕ್ಕೆ ಕಾಲಿಟ್ಟಿದೆ.

ಬಿಜೆಪಿ ಜಿಲ್ಲಾ ಯುವ ಮೋರ್ಚಾ, ಒಬಿಸಿ ಮೋರ್ಚಾ ಹಾಗೂ ಎಸ್ಸಿ ಮೋರ್ಚಾ ವತಿಯಿಂದ ಜರುಗಿದ ಪ್ರತಿಭಟನೆಯಲ್ಲಿ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಎಸ್.ಟಿ. ನಿಗಮದ ಹಣದ ದುರುಪಯೋಗದ ಆರೋಪಕ್ಕೆ ಸಂಬಂಧಿಸಿದಂತೆ ಸೂಕ್ತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಅಲ್ಲದೆ, ನೈತಿಕ ಹೊಣೆ ಹೊತ್ತು ಬಿ. ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧ್ಯಕ್ಷರಾದ ಸಂಜೀವ್ ರೆಡ್ಡಿ, ಭ್ರಷ್ಟಾಚಾರದ ಬಗ್ಗೆ ಮಾತಾಡಿದ ಕಾಂಗ್ರೆಸ್ ಹಿರಿಯ ನಾಯಕ ಕೆಎನ್.ರಾಜಣ್ಣ ಅವರ ಸಚಿವ ಸ್ಥಾನ ಕಿತ್ತುಕೊಂಡಿರಿ, ಅದೇ ಸಮಾಜದ ಬಡವರ ಕೋಟಿ ಕೋಟಿ ಹಣ ಲೂಟಿ ಮಾಡಿದ ನಾಗೇಂದ್ರ ಅವರಿಗೆ ಮತ್ತೊಂದು ಬಾರಿ ಸಚಿವ ಸ್ಥಾನ ನೀಡಿದ್ದೀರಲ್ಲ ನಾಚೀಕೆ ಆಗಲ್ವಾ.

2ನೇ ಪುಟಕ್ಕೆ....

## ರೈತರ ಪ್ರತಿಭಟನೆಗೆ ಮಣಿದ ತುಂಗಭದ್ರಾ ಮಂಡಳಿ

### 2 ಸಾವಿರ ಕ್ಯೂಸೆಕ್ ನಂತೆ 10 ದಿನ ನೀರು ಬಿಡಲು ಒಪ್ಪಿಗೆ



ಹೊಸಪೇಟೆ.ಆ.19 ವಿಜಯನಗರ, ಬಳ್ಳಾರಿ, ಕೊಪ್ಪಳ ಹಾಗೂ ರಾಯಚೂರು ಸೇರಿದಂತೆ ಮೂರು ರಾಜ್ಯಗಳ 8 ಜಿಲ್ಲೆಗಳ ಜೀವನಾಡಿ ಆಗಿರುವ ತುಂಗಭದ್ರಾ ಜಲಾಶಯದಿಂದ ನದಿಗೆ ನೀರು ಬಿಡುಗಡೆ ಮಾಡುವಂತೆ ಒತ್ತಾಯಿಸಿ ಟಿ.ಬಿ.ಡ್ಯಾಂ ನ ತುಂಗಭದ್ರಾ ಮಂಡಳಿ ಕಛೇರಿ ಎದುರು ರೈತರು ನಡೆಸಿದ ಪ್ರತಿಭಟನೆಗೆ ಮಣಿದ ತುಂಗಭದ್ರಾ ಮಂಡಳಿ ಜಲಾಶಯದಿಂದ ಪ್ರತಿ ದಿನ 2 ಸಾವಿರ ಕ್ಯೂಸೆಕ್ ನಂತೆ 10 ದಿನಗಳ ಕಾಲ ನೀರು ಬಿಡಲು ಒಪ್ಪಿಗೆ ಸೂಚಿಸಿದೆ.

ತುಂಗಭದ್ರಾ ನದಿ ಭತ್ತಿ ಹೋಗಿರುವುದರಿಂದ ರೈತರ ಬೆಳೆಗಳಿಗೆ ನೀರು ದೊರೆಯದೆ ನದಿ ಪಾತ್ರದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಅಲ್ಲದೆ ಜನ ಜಾನುವಾರುಗಳಯ ಹಾಗೂ ಜಲಚರಗಳು ನೀರಿಲ್ಲದೆ ತೊಂದರೆ ಅನುಭವಿಸುತ್ತಿವೆ. ಈ ಹಿನ್ನಲೆಯಲ್ಲಿ ತುಂಗಭದ್ರಾ ಜಲಾಶಯದಿಂದ ತಕ್ಷಣ ನದಿಗೆ ನೀರು ಬಿಡಬೇಕು ಎಂದು ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ನೇತೃತ್ವದಲ್ಲಿ ಬಳ್ಳಾರಿ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ನೂರಾರು ರೈತರು ಮಂಗಳವಾರ ತುಂಗಭದ್ರಾ ಮಂಡಳಿ ಕಛೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿದ್ದರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಸಿಂಧನೂರಿನ ಶಾಸಕ ಹಂಪನಗೌಡ ಬಾದರ್ಲಿ ಪ್ರತಿಭಟನೆಯ ನಡುವೆಯೇ ತುಂಗಭದ್ರಾ ಮಂಡಳಿಯ ಕಾರ್ಯದರ್ಶಿ ಮತ್ತು ಇತರ ಅಧಿಕಾರಿಗಳೊಂದಿಗೆ

2ನೇ ಪುಟಕ್ಕೆ...

# ಸಚಿವ ಬಿ. ನಾಗೇಂದ್ರ ವಿರುದ್ಧ ಬಿಜೆಪಿ ರಾಜೀನಾಮೆಯ ಧರಣಿ ಮೂರನೇ ದಿನಕ್ಕೆ

ಬಳ್ಳಾರಿ : ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮದ 187ಕೋಟಿ ರೂಪಾಯಿ ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಯೋಜನೆ ಮತ್ತು ಸಾಂಖಿಕ ಇಲಾಖೆಯ ಸಚಿವ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ. ನಾಗೇಂದ್ರ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಬಿಜೆಪಿ ವತಿಯಿಂದ ಆರಂಭಿಸಿರುವ ಅಹೋರಾತ್ರಿ ಧರಣಿ ಮೂರನೇ ದಿನಕ್ಕೆ ಕಾಲಿಟ್ಟಿದೆ.

ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಹಗಲು-ರಾತ್ರಿ ಧರಣಿ ನಡೆಸುತ್ತಿದ್ದು, ಮೂರನೇ ದಿನವೂ ಪ್ರತಿಭಟನೆ ಮುಂದುವರಿಯಿತು. ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನಾಕಾರರು ಘೋಷಣೆಗಳನ್ನು ಕೂಗಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಬಳ್ಳಾರಿ ನಗರ ಅಧ್ಯಕ್ಷ ಗುರ್ರಮ್ ವೆಂಕಟ್ರಮಣ ಮಾತನಾಡಿ, ಸಚಿವ ಬಿ. ನಾಗೇಂದ್ರ ರಾಜೀನಾಮೆಗೆ

2ನೇ ಪುಟಕ್ಕೆ...



ಅನಂತ ಜನಶಕ್ತಿ



# ಪೂರ್ವಭಾವಿ ಸಭೆಯಲ್ಲಿ ನಿರ್ಧಾರ: ಮಹನೀಯರ ಜಯಂತಿಗಳ ಅರ್ಥಪೂರ್ಣ ಆಚರಣೆ – ತಹಶೀಲ್ದಾರ ಶೇಷಾವಲಿ

ಬಳ್ಳಾರಿ : ಜಿಲ್ಲಾ ಕೇಂದ್ರದಲ್ಲಿ ಮಹನೀಯರ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಸಹಾಯಕ ಆಯುಕ್ತರ ಕಚೇರಿಯ ತಹಶೀಲ್ದಾರ ಶೇಷಾವಲಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ವಿವಿಧ ಮಹನೀಯರ ಜಯಂತಿಗಳನ್ನು ಆಚರಿಸುವ ಕುರಿತು ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರಿ ನಿಯಮಾವಳಿಗಳ ಅನ್ವಯ ಮಹನೀಯರ ಜಯಂತಿಗಳನ್ನು ಕೇವಲ ಸಾಂಪ್ರದಾಯಿಕ ಕಾರ್ಯಕ್ರಮವನ್ನಾಗಿ ಸೀಮಿತಗೊಳಿಸದೆ, ಅವರ ಆದರ್ಶ, ತತ್ವ ಹಾಗೂ ಸಮಾಜಮುಖಿ ಸಂದೇಶಗಳನ್ನು ಯುವ ಪೀಳಿಗೆಗೆ ಮುಟ್ಟಿಸುವ ನಿಟ್ಟನಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದರು. ಆ.28 ರಂದು ಸಮಾಜ ಸುಧಾರಕ ಬ್ರಹ್ಮಶ್ರೀ ನಾರಾಯಣಗುರು ಜಯಂತಿ, ಆ.30 ರಂದು ಕಾಯಕ ಶರಣ ನುಲಿಯ ಚಂದಯ್ಯ ಜಯಂತಿ ಹಾಗೂ ಸೆ.04 ರಂದು ಶ್ರೀಕೃಷ್ಣ ಜಯಂತಿ ಕಾರ್ಯಕ್ರಮಗಳನ್ನು ವಿಜೃಂಭಣೆಯಿಂದ, ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ನಿರ್ಧರಿಸಲಾಯಿತು.

ಜಯಂತಿ ಕಾರ್ಯಕ್ರಮ ದಿನಗಳಂದು ಬೆಳಿಗ್ಗೆ 09 ಗಂಟೆಗೆ ನಗರದ ಮುನಿಸಿಪಲ್ ಕಾಲೇಜು ಮೈದಾನದಿಂದ ಗಡಿಗಿ ಚೆನ್ನಪ್ಪ ವೃತ್ತ– ಹಳೆಯ ಜಿಲ್ಲಾಧಿಕಾರಿ ಕಚೇರಿ ಮುಂಭಾಗ– ಹೆಚ್.ಆರ್.ಗವಿಯಪ್ಪ ವೃತ್ತದ ಮಾರ್ಗವಾಗಿ ಡಾ.ಜೋಳದ ರಾಶಿ ದೊಡ್ಡನಗೌಡ ರಂಗಮಂದಿರದ ವೇದಿಕೆ ಕಾರ್ಯಕ್ರಮದವರೆಗೆ ಸಾಂಸ್ಕೃತಿಕ ಕಲಾ ತಂಡಗಳು ಒಳಗೊಂಡ ಮೆರವಣಿಗೆ ನಡೆಯಲಿದೆ. ಬಳಿಕ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ಕಾರ್ಯಕ್ರಮ ನಡೆಯುವ ವೇದಿಕೆ ನಿರ್ವಹಣೆ, ಆಹ್ವಾನ ಪತ್ರಿಕೆ ಮುದ್ರಣ ಹಾಗೂ ವಿತರಣೆ, ಗಣ್ಯರ ಉಪಸ್ಥಿತಿ, ಉಪನ್ಯಾಸಕರ ಆಯ್ಕೆ, ಭಕ್ತಿ ಸಂಗೀತ ಮತ್ತು ಮೂಲಸೌಕರ್ಯಗಳ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಜವಾಬ್ದಾರಿ ಹಂಚಿಕೆ ಮಾಡಲಾಯಿತು.

ಬ್ಯಾನರ್, ಪಟಾಕಿ, ಡಿಜೆ ಧ್ವನಿವರ್ಧಕಗಳನ್ನು ಸಂಪೂರ್ಣವಾಗಿದೆ ನಿಷೇಧಿಸಲಾಗಿದೆ. ಮಹನೀಯರ ಎಲ್ಲಾ ಜಯಂತಿ ಕಾರ್ಯಕ್ರಮಗಳಲ್ಲಿ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಬಿ. ನಾಗರಾಜ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮಗಳ ರೂಪುರೇಷೆ ವಿವರಿಸಿದರು.

ಈ ವೇಳೆ ಪೊಲೀಸ್ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಮಹಾನಗರ ಪಾಲಿಕೆ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಸಭೆಯಲ್ಲಿ ಉಪಸ್ಥಿತರಿದ್ದು, ಸಲಹೆ–ಸೂಚನೆಗಳನ್ನು ಹಂಚಿಕೊಂಡರು.

# ನಿವೃತ್ತ ನೌಕರರಿಗೆ ನಗದು ರಹಿತ ಚಿಕಿತ್ಸೆ: ಸರ್ಕಾರದ ತೀರ್ಮಾನಕ್ಕೆ ಸಂಘದ ಸ್ವಾಗತ

ಬಳ್ಳಾರಿ : ರಾಜ್ಯದ ಸರ್ಕಾರಿ ನಿವೃತ್ತ ನೌಕರರು ಹಾಗೂ ಕುಟುಂಬ ಪಿಂಚಣಿದಾರರಿಗೆ ನಗದು ರಹಿತ ಚಿಕಿತ್ಸೆ ಒದಗಿಸುವ 'ಸಂಧ್ಯಾ ಕಿರಣ' ಯೋಜನೆ ಜಾರಿಗೆ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ದೊರೆತಿದ್ದು, ಈ ನಿರ್ಧಾರವನ್ನು ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ ಸ್ವಾಗತಿಸಿದೆ. ರಾಜ್ಯದಲ್ಲಿ ಸುಮಾರು 5.20 ಲಕ್ಷ ನಿವೃತ್ತ ನೌಕರರು ಹಾಗೂ ಕುಟುಂಬ ಪಿಂಚಣಿದಾರರಿದ್ದಾರೆ. 60ರಿಂದ 70 ವರ್ಷದೊಳಗಿನ ನಿವೃತ್ತ ನೌಕರರಿಗೆ ಆರೋಗ್ಯ ಭದ್ರತೆ ಒದಗಿಸಲು 'ಸಂಧ್ಯಾ ಕಿರಣ' ಯೋಜನೆಯನ್ನು ಅನುಷ್ಠಾನಗೊಳಿಸಬೇಕೆಂದು ಸಂಘವು ಸರ್ಕಾರದ ಹಂತದಲ್ಲಿ ನಿರಂತರವಾಗಿ ಮನವಿ ಸಲ್ಲಿಸುತ್ತಾ ಬಂದಿತ್ತು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಆಗಸ್ಟ್ 13 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಯೋಜನೆಗೆ ಒಪ್ಪಿಗೆ ನೀಡಲಾಗಿದ್ದು, ಇದಕ್ಕಾಗಿ ಮುಖ್ಯಮಂತ್ರಿಗಳು, ಆರೋಗ್ಯ ಸಚಿವರು ಹಾಗೂ ಮುಖ್ಯ ಕಾರ್ಯದರ್ಶಿಗಳಿಗೆ ಸಂಘದ ಅಧ್ಯಕ್ಷ ಡಾ. ಎಲ್. ಬೈರಪ್ಪ ಅವರು ಅಭಿನಂದನೆ ಸಲ್ಲಿಸಿದ್ದಾರೆ.

ಒಂದನೇ ಪುಟದಿಂದ..

# ನಕಲಿ ಔಷಧ ದಂಧೆ-ದುಬೈ ಕಿಂಗ್‌ಪಿನ್ ಸಂಪರ್ಕ: ಖಾದರ್

ಹೆಸರಿನಲ್ಲಿ ಮಾರಾಟ ಮಾಡಲಾಗುತ್ತಿದೆ. 20,000 ರೂಪಾಯಿ ಬೆಲೆಯ ಇಂಜೆಕ್ಷನ್‌ವೊಂದನ್ನು 5,000 ರೂಪಾಯಿಗಳಿಂದ 6,000 ರೂಪಾಯಿಗೆ ಆಸ್ಪತ್ರೆಗಳಿಗೆ ಪೂರೈಸಲಾಗುತ್ತಿದೆ. ಇದು ಕರ್ನಾಟಕಕ್ಕೆ ಮಾತ್ರ ಸೀಮಿತವಾದ ಸಮಸ್ಯೆಯಲ್ಲ ಎಂದು ವಿವರಿಸಿದರು.

ನಕಲಿ ಔಷಧಗಳನ್ನು ಸಂಗ್ರಹಿಸಿದ್ದ ಸ್ಥಳವು ಮಾನ್ಯ ಪರವಾನಗಿ ಇಲ್ಲದೆ ಕಾರ್ಯನಿರ್ವಹಿಸುತ್ತಿತ್ತು ಎಂದು ಸಚಿವರು ತಿಳಿಸಿದರು. ನಕಲಿ ಔಷಧಗಳಿಗೆ ಬಳಸಲಾದ ಲೇಬಲ್‌ಗಳು ಮತ್ತು ಸ್ಟಿಕ್ಕರ್‌ಗಳನ್ನು ಸ್ಥಳೀಯವಾಗಿಯೇ ತಯಾರಿಸಲಾಗಿತ್ತೇ ಅಥವಾ ಬೇರೆ ಮೂಲಗಳಿಂದ ತರಲಾಗಿತ್ತೇ ಎಂಬ ಬಗ್ಗೆಯೂ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.

ಆರೋಪಿಗಳು ಆಸ್ಪತ್ರೆಗಳಿಂದಲೇ ಲೇಬಲ್‌ಗಳು ಮತ್ತು ಸ್ಟಿಕ್ಕರ್‌ಗಳನ್ನು ಪಡೆದು ಅವುಗಳನ್ನು ನಕಲಿ ಔಷಧಗಳಿಗೆ ಬಳಸಿರುವ ಸಾಧ್ಯತೆಯಿದೆ ಎಂದು ನಾವು ಶಂಕಿಸುತ್ತಿದ್ದೇವೆ ಎಂದು ಖಾದರ್ ಹೇಳಿದರು.

ಈ ದಂಧೆಯಲ್ಲಿ ಹಲವು ಹಂತಗಳಿವೆ ಎಂದು ಸಚಿವರು ತಿಳಿಸಿದರು. ಕಚ್ಚಾ ವಸ್ತುಗಳು ಮತ್ತು ಔಷಧಗಳ ಖರೀದಿ, ಸಾಗಣೆ, ಮರುಪ್ಯಾಕಿಂಗ್, ವಿತರಣೆ ಹಾಗೂ ಆಸ್ಪತ್ರೆಗಳಿಗೆ ಪೂರೈಕೆ ಸೇರಿದಂತೆ ಹಲವು ಹಂತಗಳನ್ನು ಒಳಗೊಂಡಿರುವ ಸಾಧ್ಯತೆಯಿದೆ. ಇದೀಗ ಮಧ್ಯವರ್ತಿಗಳು ಯಾರು ಹಾಗೂ ಯಾವ ಆಸ್ಪತ್ರೆಗಳು ಮತ್ತು ಔಷಧ ಮಳಿಗೆಗಳು ಈ ನಕಲಿ ಔಷಧಗಳನ್ನು ಪಡೆದಿವೆ ಎಂಬುದನ್ನು ಪತ್ತೆಹಚ್ಚಲು ಅಧಿಕಾರಿಗಳು ಮುಂದಾಗಿದ್ದಾರೆ.

ಮುಖ್ಯ ಆರೋಪಿ ಪ್ರಶಾಂತ್ ದುಬೈನಲ್ಲಿ ಇರುವ ಸಾಧ್ಯತೆಯಿದೆ. ತೇಜಸ್ ಸ್ಥಳೀಯವಾಗಿ ಕಾರ್ಯಾಚರಣೆ ನಡೆಸುತ್ತಿದ್ದ ವ್ಯಕ್ತಿ ಎಂದು ಗುರುತಿಸಲಾಗಿದೆ. ಬಂಧಿತ ಪ್ರಭುದೇವ್‌ನನ್ನು ವಿಚಾರಣೆ ನಡೆಸಲಾಗುತ್ತಿದ್ದು, ಇಡೀ ಪೂರೈಕೆ ಜಾಲದ ಬಗ್ಗೆ ಮಾಹಿತಿ ಕಲೆಹಾಕಲಾಗುತ್ತಿದೆ ಎಂದು ಯು ಟಿ ಖಾದರ್ ಹೇಳಿದರು.

# ಸಚಿವ ಬಿ. ನಾಗೇಂದ್ರ ವಿರುದ್ಧ ಬಿಜೆಪಿ ರಾಜೀನಾಮೆಯ ಧರಣಿ ಮೂರನೇ ದಿನಕ್ಕೆ

ಆಗ್ರಹಿಸಿ ಈಗಾಗಲೇ ಎರಡು ದಿನಗಳಿಂದ ಅಹೋರಾತ್ರಿ ಧರಣಿ ನಡೆಸಿದ್ದು, ಇದೀಗ ಮೂರನೇ ದಿನಕ್ಕೆ ಕಾಲಿಟ್ಟಿದ್ದೇವೆ. ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮದ ಹಣಕಾಸು ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಗಂಭೀರ ಆರೋಪಗಳು ಕೇಳಿಬಂದಿರುವ ಹಿನ್ನೆಲೆಯಲ್ಲಿ ನಾಗೇಂದ್ರ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಏಕೆ ನೇಮಕ ಮಾಡಲಾಗಿದೆ? ಎಂದು ಪ್ರಶ್ನಿಸಿದ ವೆಂಕಟರಮಣ, ಅವರಿಂದ ಇನ್ನೂ ಹೆಚ್ಚಿನ ಭ್ರಷ್ಟಾಚಾರ ನಡೆಯುವ ಸಾಧ್ಯತೆ ಇದೆ ಕೂಡಲೇ ಅವರನ್ನು ಸಚಿವ ಸಂಪುಟದಿಂದ ವಜಾ ಮಾಡಬೇಕೆಂದು ಆಗ್ರಹಿಸಿದರು.

ಪ್ರಕರಣದ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಸಚಿವರ ರಾಜೀನಾಮೆ ಪಡೆಯುವವರೆಗೆ ಅಹೋರಾತ್ರಿ ಧರಣಿ ಮುಂದುವರಿಸಲಾಗುವುದು ಎಂದರು.

ಈ ಧರಣಿಯಲ್ಲಿ ಸಿರುಗುಪ್ಪ ಮಾಜಿ ಶಾಸಕ ಎಂ ಎಸ್ ಸೋಮಲಿಂಗಪ್ಪ, ಬಿಜೆಪಿ ಮುಖಂಡರಾದ ಸಿದ್ದಪ್ಪ, ಎಚ್ ಹನುಮಂತಪ್ಪ, ಮಹಿಳಾ ಘಟಕದ ಕಾರ್ಯಕರ್ತರಾದ ಪುಷ್ಪ ಸಾಧನ ಹಿರೇಮಠ್ ಮತ್ತು ಚಾಂದಿನಿ ಸೇರಿದಂತೆ ಇತರರು ಭಾಗವಹಿಸಿದ್ದರು.

# ಮೂಡಾ ಅಕ್ರಮಕ್ಕೆ ಬ್ರೇಕ್: 2000 ಕೋಟಿ ಮೌಲ್ಯದ 1,100 ಸೈಟುಗಳ ಹಂಚಿಕೆ ರದ್ದು ಮಾಡಿದ ಯತೀಂದ್ರ ಸಿದ್ದರಾಮಯ್ಯ




ಮೈಸೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಗರಣದಲ್ಲಿ ಪ್ರಮುಖ ಟ್ವಿಸ್ಟ್ ಸಿಕ್ಕಿದ್ದು, ವಿವಾದಾತ್ಮಕ 50:50 ಅನುಪಾತದ ನಿಯಮದಡಿ ಅಕ್ರಮವಾಗಿ ಹಂಚಿಕೆಯಾಗಿದ್ದ ಎಲ್ಲಾ 1,100 ಬದಲಿ ನಿವೇಶನಗಳ ಹಂಚಿಕೆಯನ್ನು ತಕ್ಷಣದಿಂದಲೇ ರದ್ದುಗೊಳಿಸಿ ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಆದೇಶ ಹೊರಡಿಸಿದ್ದಾರೆ. ಈ ಐತಿಹಾಸಿಕ ತೀರ್ಮಾನದಿಂದಾಗಿ ಸರ್ಕಾರಕ್ಕೆ ಬರೋಬ್ಬರಿ 2,000 ಕೋಟಿ ಮೌಲ್ಯದ ಸಾರ್ವಜನಿಕ ಆಸ್ತಿ ಉಳಿದಂತಾಗಿದೆ. ಆ ಕುರಿತ ವರದಿ ಇಲ್ಲಿದೆ:

ಮುಡಾ 50:50 ಹಗರಣ ಎಂದರೆ ಸಾರ್ವಜನಿಕ ಸೌಲಭ್ಯಗಳಿಗಾಗಿ (ರಸ್ತೆ, ಪಾರ್ಕ್ ಇತ್ಯಾದಿ) ರೈತ–ರಿಂದ ಅಥವಾ ಜಮೀನು ಮಾಲೀಕರಿಂದ ಮುಡಾ ಪ್ರಾಧಿಕಾರವು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುತ್ತದೆ. ಈ ಯೋಜನೆ ಅಡಿಯಲ್ಲಿ, ಭೂಮಿ ಕಳೆದುಕೊಂಡ ಮಾಲೀಕರಿಗೆ ಹಣದ ಬದಲಾಗಿ, ಅಭಿವೃದ್ಧಿಪಡಿಸಿದ ಬಡಾವಣೆಯಲ್ಲಿ ಶೇ. 50 ರಷ್ಟು ನಿವೇಶನಗಳನ್ನು ಬದಲಿ ಪರಿಹಾರವಾಗಿ ನೀಡಲು 2020 ರಲ್ಲಿ ಒಂದು ನಿರ್ಣಯ ಕೈಗೊಳ್ಳಲಾಗಿತ್ತು. ಅಂದರೆ, ಮಾಲೀಕರು ನೀಡಿದ 1 ಎಕರೆ ಭೂಮಿಗೆ ಪ್ರತಿಯಾಗಿ ಮುಡಾ ಅಭಿವೃದ್ಧಿಪಡಿಸಿದ ನಿವೇಶನಗಳ ಅರ್ಧದಷ್ಟು ಭಾಗವನ್ನು ಅವರಿಗೆ ನೀಡಬೇಕಿತ್ತು.

ಆದರೆ, ಮುಡಾ ಮಂಡಳಿಯ ಗಮನಕ್ಕೆ ತರದೆ, ನಕಲಿ ಮತ್ತು ಬೋಗಸ್ ದಾಖಲೆಗಳನ್ನು ಸೃಷ್ಟಿಸಿ ಅನರ್ಹ ವ್ಯಕ್ತಿಗಳಿಗೆ ಅತ್ಯಂತ ದುಬಾರಿ ಮತ್ತು ಪೋಷ್ ಏರಿಯಾಗಳಲ್ಲಿ ಬದಲಿ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಅದರಲ್ಲೂ, ಈ ಯೋಜನೆಯಲ್ಲಿ ಅಕ್ರಮಗಳು ನಡೆಯುತ್ತಿರುವುದನ್ನು ಗಮನಿಸಿ, ರಾಜ್ಯ ಸರ್ಕಾರವು ಮಾರ್ಚ್ 14, 2023 ರಂದೇ ಈ 50:50 ಅನುಪಾತದಡಿ ನಿವೇಶನ ಹಂಚಿಕೆ ಮಾಡುವುದನ್ನು ನಿಲ್ಲಿಸುವಂತೆ ಕಟ್ಟುನಿಟ್ಟಿನ ಆದೇಶ ನೀಡಿತ್ತು. ಆದಾಗ್ಯೂ, ಮುಡಾ ಅಧಿಕಾರಿಗಳು ಸರ್ಕಾರದ ಆದೇಶವನ್ನು ಉಲ್ಲಂಘಿಸಿ ಹಿಂಬಾಗಿಲಿನಿಂದ ನಿವೇಶನಗಳ ಹಂಚಿಕೆಯನ್ನು ಮುಂದುವರಿಸಿದ್ದರು.

ಹಾಗಾಗಿ, ರಾಜ್ಯ ಸರಕಾರವು, ಈ ಕುರಿತ ಸಮಗ್ರ ತನಿಖೆಗಾಗಿ, ನ್ಯಾಯಮೂರ್ತಿ ಪಿ.ಎನ್. ದೇಸಾಯಿ ನೇತೃತ್ವದ ಏಕಸದಸ್ಯ ವಿಚಾರಣಾ ಆಯೋಗ ಮತ್ತು ಉನ್ನತ ಮಟ್ಟದ ತಾಂತ್ರಿಕ ಸಮಿತಿಯನ್ನು ನೇಮಿಸಿತ್ತು. ಅದರಂತೆ, ತನಿಖಾ ಆಯೋಗದ ವರದಿಯಲ್ಲಿ ಈ ನಿಯಮ ಉಲ್ಲಂಘನೆ ಸಾಬೀತಾದ ಹಿನ್ನೆಲೆಯಲ್ಲಿ, ನಗರಾಭಿವೃದ್ಧಿ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರು, ಅಕ್ರಮವಾಗಿ ಹಂಚಿಕೆಯಾಗಿದ್ದ ಎಲ್ಲಾ 1,100 ನಿವೇಶನಗಳನ್ನು ತಕ್ಷಣದಿಂದ ರದ್ದುಗೊಳಿಸಿದ್ದಾರೆ. ಈ ಮೂಲಕ ಸುಮಾರು 2,000 ಕೋಟಿ ಮೌಲ್ಯದ ಸಾರ್ವಜನಿಕ ಆಸ್ತಿಯನ್ನು ಸರ್ಕಾರ ಮರಳಿ ವಶಕ್ಕೆ ಪಡೆದುಕೊಂಡಿದೆ. ಅದರಂತೆ, ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧೀನ ಕಾರ್ಯದರ್ಶಿ ಕೆ. ಲತಾ ಅವರು ಈ ಆದೇಶವನ್ನು ಮುಡಾ ಆಯುಕ್ತರಿಗೆ ಅಧಿಕೃತವಾಗಿ ರವಾನಿಸಿದ್ದಾರೆ.

ಕೇವಲ ಹಂಚಿಕೆ ಆದೇಶ ರದ್ದು ಮಾಡುವುದಷ್ಟೇ ಅಲ್ಲದೆ, ಈಗಾಗಲೇ ಪ್ರಭಾವಿಗಳ ಹೆಸರಿಗೆ ನೋಂದಣಿಯಾಗಿರುವ ಸೈಟ್‌ಗಳ ಮೇಲೂ ಸರ್ಕಾರ ಗದಾಪ್ರಹಾರ ನಡೆಸಿದೆ. ಅದರಂತೆ, ಈಗಾಗಲೇ ಉಪನೋಂದಣಾಧಿಕಾರಿ (ಸಬ್–ರಿಜಿಸ್ಟ್ರಾರ್) ಕಚೇರಿಯಲ್ಲಿ ಕ್ರಯಪತ್ರ ಆಗಿರುವ ನಿವೇಶನಗಳನ್ನು ಕಾನೂನಾತ್ಮಕವಾಗಿ ರದ್ದುಪಡಿಸಲು ತಕ್ಷಣವೇ ಸಿವಿಲ್ ನ್ಯಾಯಾಲಯದಲ್ಲಿ ದಾವೆ ಹೂಡಲು ಮುಡಾ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಇದರೊಂದಿಗೆ, ಈಗಾಗಲೇ ಅಕ್ರಮವಾಗಿ ಹಂಚಿಕೆಯಾಗಿ, ನೋಂದಣಿಯಾಗಿರುವ ನಿವೇಶನಗಳಿಗೆ ಖಾತಾ ಮಾಡಿಕೊಡುವುದನ್ನು ತಕ್ಷಣವೇ ನಿಲ್ಲಿಸಬೇಕು ಎಂದು ಮೈಸೂರು ಮಹಾನಗರ ಪಾಲಿಕೆ, ನಗರಸಭೆ ಹಾಗೂ ಗ್ರಾಮ ಪಂಚಾಯಿತಿಗಳಿಗೆ ಆದೇಶಿಸಲಾಗಿದೆ. ಒಂದು ವೇಳೆ ಈಗಾಗಲೇ ಖಾತಾ ಆಗಿದ್ದರೆ, ಅವುಗಳನ್ನೂ ರದ್ದುಗೊಳಿಸಲು ಸೂಚಿಸಲಾಗಿದೆ. ಜೊತೆಗೆ, ಸರ್ಕಾರದ ಮುಂದಿನ ಸ್ಪಷ್ಟ ಮಾರ್ಗಸೂಚಿ ಅಥವಾ ಆದೇಶ ಬರುವವರೆಗೂ ಮುಡಾ ಪ್ರಾಧಿಕಾರದಿಂದ ಯಾವುದೇ ಹೊಸ ಕ್ರಯಪತ್ರಗಳನ್ನು ಯಾರಿಗೂ ನೀಡದಂತೆ ಕಟ್ಟುನಿಟ್ಟಾಗಿ ತಡೆಯೊಡ್ಡಲಾಗಿದೆ.

# ಸಿಎಂ ವಿಜಯ್ ಯು- ಟರ್ನ್: ಮತ್ತೊಂದು ಮಹತ್ವದ ಆದೇಶ ಹಿಂಪಡೆದ ತಮಿಳುನಾಡು ಸರ್ಕಾರ!



ಚೆನ್ನೈ: ಮುಖ್ಯಮಂತ್ರಿ ವಿಜಯ್ ಯು– ಟರ್ನ್ ಹೊಡೆದಿದ್ದು, ತಮಿಳುನಾಡು ಸರ್ಕಾರ ಮತ್ತೊಂದು ಆದೇಶವನ್ನು ಒಂದೇ ದಿನದಲ್ಲಿ ವಾಪಸ್ ಪಡೆದು–ಕೊಂಡಿದೆ. ವಿದ್ಯಾರ್ಥಿಗಳು ಪ್ರತಿಭಟನೆ ಮತ್ತು ರಾಜಕೀಯ ಪ್ರದರ್ಶನಗಳಲ್ಲಿ ಭಾಗವಹಿಸುವುದನ್ನು ತಡೆಯುವ ಉದ್ದೇಶದಿಂದ ಹೊರಡಿಸಿದ್ದ ಆದೇಶವನ್ನು ಕೇವಲ 24 ಗಂಟೆಗಳಲ್ಲೇ ಹಿಂಪಡೆದಿದೆ.

ಎಡಪಂಥೀಯ ಪಕ್ಷಗಳು ಮತ್ತು 'ತಮಿಳುನಾಡು ಕಾಕ್ರೋಚ್ ಜನತಾ ಪಾರ್ಟಿ' ಆಯೋಜಿಸುವ ಕಾರ್ಯಕ್ರಮಗಳು ಸೇರಿದಂತೆ ವಿವಿಧ ಪ್ರತಿಭಟನೆಗಳಿಂದ ವಿದ್ಯಾರ್ಥಿಗಳನ್ನು ದೂರವಿಡಲು ಕ್ರಮ ಕೈಗೊಳ್ಳುವಂತೆ ಕಾಲೇಜು ಶಿಕ್ಷಣ ನಿರ್ದೇಶನಾಲಯವು ಶಾಲೆಗಳು, ಕಾಲೇಜುಗಳು, ಪೊಲೀಸ್ ಮತ್ತು ಜಿಲ್ಲಾಡಳಿತಗಳಿಗೆ ಸೂಚನೆ ನೀಡಿತ್ತು.

ಈ ಕ್ರಮವು ಅಎಕಯಿಂದ ಟೀಕೆಗೆ ಗುರಿಯಾಗಿತ್ತಲ್ಲದೇ ಇದನ್ನು 'ಸಂವಿಧಾನ ಬಾಹಿರ' ಎಂದು ಕರೆದಿತ್ತು. ಈ ಆದೇಶವು ರಾಜಕೀಯ ವಿವಾದಕ್ಕೆ ಕಾರಣವಾದ ನಂತರ ಸರ್ಕಾರವು ಅಂತಿಮವಾಗಿ ತನ್ನ ನಿರ್ಧಾರವನ್ನು ಬದಲಿಸಿದೆ.

ತಮಿಳುನಾಡಿನಾದ್ಯಂತ 'ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀ–ಕ್ಷೆ' ವಿರುದ್ಧ ಪ್ರತಿಭಟನೆಗಳು ನಡೆಯುತ್ತಿದ್ದ ಸಂದರ್ಭದಲ್ಲಿ ಈ ನಿರ್ದೇಶನವನ್ನು ಹೊರಡಿಸಲಾಗಿತ್ತು. ಅಎಕ ಮತ್ತು ಎಡಪಂಥೀಯ ಗುಂಪುಗಳಿಗೆ ಸಂಬಂಧಿಸಿದ ವಿದ್ಯಾರ್ಥಿ ಸಂಘಟನೆಗಳು ಪ್ರತಿಭಟನೆಗಳಲ್ಲಿ ಭಾಗವಹಿಸುತ್ತಿದ್ದವು. ಹೀಗಾಗಿ, ಇಂತಹ ಚಟುವಟಿಕೆಗಳಲ್ಲಿ ಪಾಲ್ಗೊಳ್ಳದಂತೆ ವಿದ್ಯಾರ್ಥಿಗಳಿಗೆ ತಿಳಿಹೇಳುವಂತೆ ಸರ್ಕಾರವು ಶಿಕ್ಷಣ ಸಂಸ್ಥೆಗಳು ಮತ್ತು ಅಧಿಕಾರಿಗಳಿಗೆ ಸೂಚಿಸಿತ್ತು. ಆದರೆ ಈ ಆದೇಶವು ಶೀಘ್ರದಲ್ಲೇ ರಾಜಕೀಯ ವಿವಾದದ ಕೇಂದ್ರಬಿಂದುವಾಯಿತು.

ಒಂದನೇ ಪುಟದಿಂದ..

# ರೈತರ ಪ್ರತಿಭಟನೆಗೆ ಮಣಿದ ತುಂಗಭದ್ರಾ ಮಂಡಳಿ

## 2 ಸಾವಿರ ಕ್ಯೂಸೆಕ್ ನಂತೆ 10 ದಿನ ನೀರು ಬಿಡಲು ಒಪ್ಪಿಗೆ

ಮಾತುಕತೆ ನಡೆಸಿದರು. ರೈತರ ಬೇಡಿಕೆಯನ್ನು ಮಂಡಳಿ ಒಪ್ಪಿಕೊಂಡಿದ್ದು, ಪ್ರತಿ ದಿನ 2 ಸಾವಿರ ಕ್ಯೂಸೆಕ್ ನಂತೆ 10 ದಿನಗಳ ಕಾಲ ನದಿಗೆ ನೀರು ಬಿಡಲು ಅಧಿಕಾರಿಗಳು ಒಪ್ಪಿಕೊಂಡಿದ್ದಾರೆ ಎಂದು ರೈತರಿಗೆ ತಿಳಿಸಿದರು. ಹೀಗಾಗಿ ಅನಿರ್ದಿಷ್ಟ ಅವಧಿಗೆ ಪ್ರತಿಭಟನೆ ನಡೆಸಲು ನಿರ್ಧರಿಸಿದ್ದ ರೈತರು ತಮ್ಮ ನಿರ್ಧಾರ ಕೈಬಿಟ್ಟು ಪ್ರತಿಭಟನೆ ಸ್ಥಗಿತಗೊಳಿಸಿದರು.

ಪ್ರತಿಭಟನೆ ನಡೆಯುತ್ತಿದ್ದ ಒಂದು ಹಂತದಲ್ಲಿ ಶಾಸಕ ಬಾದರ್ಲಿ ಮತ್ತು ಮಾಜಿ ಶಾಸಕ ಬಸವರಾಜ ದಡೇಸುಗೂರು ನಡುವೆ ಸಚಿವ ಶಿವರಾಜ ತಂಗಡಗಿ ಅವರನ್ನು ಗುರಿಯಾಗಿಸಿಕೊಂಡು ಮಾತಿನ ಚಕಮಕಿ ನಡೆಯಿತು. ಇತರ ರೈತರಿಂದಲೂ ಗದ್ದಲ, ಗಲಾಟೆ ನಡೆಯಿತು. ಈ ಸಂದರ್ಭದಲ್ಲಿ ಮಧ್ಯಪ್ರವೇಶಿಸಿದ ಪೊಲೀಸರು ಪರಿಸ್ಥಿತಿ ತಿಳಿಗೊಳಿಸಿದರು.

ತಂಗಡಗಿ ವಿರುದ್ಧ ಆಕ್ರೋಶ: ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ರೈತರು ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ಕುರಿತು ತಮ್ಮ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಆಗಿರುವ ಸಚಿವ ತಂಗಡಗಿ ಅವರಿಗೆ ತುಂಗಭದ್ರಾ ಜಲಾಶಯ ಸೇರಿದಂತೆ ನೀರಾವರಿ ಬಗ್ಗೆ ಯಾವುದೇ ಮಾಹಿತಿಯಿಲ್ಲ. ಅಂತಹವರಿಂದ ರೈತರಿಗೆ ನ್ಯಾಯ ದೊರಕಿಸಲು ಸಾಧ್ಯವಿಲ್ಲ. ಈ ಹಿನ್ನಲೆಯಲ್ಲಿ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಸ್ಥಾನದಿಂದ ರಾಜೀನಾಮೆ ಪಡೆಯಬೇಕು. ರಾಜೀನಾಮೆ ನೀಡದಿದ್ದರೆ ಅಧ್ಯಕ್ಷ ಸ್ಥಾನದಿಂದ ತೆಗೆದುಹಾಕಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರನ್ನು ಪ್ರತಿಭಟನಾನಿರತ ರೈತರು ಒತ್ತಾಯಿಸಿದ್ದು ಕಂಡು ಬಂದಿತು.

ಬಚಾವತ್ ಆಯೋಗದ ವರದಿ ಪ್ರಕಾರವೇ ತುಂಗಭದ್ರಾ ಜಲಾಶಯದ ನೀರಿನ ಹಂಚಿಕೆ ಮಾಡಲಾಗುತ್ತಿದೆ. ತುಂಗಭದ್ರಾ ನದಿ ಭತ್ತದಂತೆ ನೋಡಿಕೊಳ್ಳಲು ವರದಿಯಲ್ಲಿ ಆದೇಶಿಸಲಾಗಿದೆ. ಅದರೆ ಆ ಆದೇಶವನ್ನು ಜಾರಿ ಮಾಡುವಲ್ಲಿ ತುಂಗಭದ್ರಾ ಮಂಡಳಿ ಅಧಿಕಾರಿಗಳು ವಿಫಲರಾಗಿದ್ದಾರೆ.

ಶಾಸಕರು, ಸಚಿವರು ಯಾರೇ ಇರಲಿ, ಸರ್ಕಾರ ಯಾವುದೇ ಆಗಿರಲಿ ನದಿಗೆ ನೀರು ಬಿಡಲೇ ಬೇಕು. ನದಿಗೆ ನೀರು ಬಿಡದಿರುವುದರಿಂದ ಜಲಚರಗಳು ಸಾಯುತ್ತಿವೆ. ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಶಿವರಾಜ್ ತಂಗಡಗಿ ಅವರಿಗೆ ನೀರಿನ ಅರಿವು, ನೆಲ, ಜಲ ಸಂಸ್ಕೃತಿ ಬಗ್ಗೆ ಏನೂ ಗೊತ್ತಿಲ್ಲ. ಅಂತಹವರು ಅಧ್ಯಕ್ಷ ಆಗಿದ್ದಾರೆ. ನಾವು ಹೋರಾಟ ಮಾಡಿಯಾದರೂ ನೀರು ಪಡೆಯುತ್ತೇವೆ.

ತುಂಗಭದ್ರಾ ಮಂಡಳಿ ತೀರ್ಮಾನದ ಬಗ್ಗೆ ನಮಗೆ ಸಮಾಧಾನ ಇಲ್ಲ. ನದಿಗೆ ನೀರು ಬಿಡುವ ಕುರಿತು ಸರ್ಕಾರ ಅಧಿಕೃತ ಘೋಷಣೆ ಮಾಡಬೇಕು.

ಜಲಾಶಯಕ್ಕೆ ಬರುತ್ತಿರುವ ಒಳ ಹರಿವು ನೋಡಿದರೆ, 100 ಟಿಎಂಸಿ ಗೂ ಅಧಿಕ ನೀರು ಜಲಾಶಯಕ್ಕೆ ಹರಿದು ಬಂದಿದೆ. ಆದರೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಸೇರಿ–ಕೊಂಡು ಕಳ್ಳ ಲೆಕ್ಕ ನೀಡುವ ಮೂಲಕ ನೀರನ್ನು ಕಾರ್ಖಾನೆಗಳಿಗೆ ಮಾರಿಕೊಳ್ಳುತ್ತಿದ್ದಾರೆ. ಐಸಿಸಿ ಅಧ್ಯಕ್ಷರ ಸರ್ವಾಧಿಕಾರಿ ಧೋರಣೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.

# ಯಾದಗಿರಿಯಲ್ಲಿ ಬೆಚ್ಚಿಬೀಳಿಸುವ ಘಟನೆ; ಹೆಂಡತಿ ಮೇಲಿನ ಕೋಪಕ್ಕೆ, ಮೂವರು ಮಕ್ಕಳನ್ನು ಬೈಕ್‌ನಲ್ಲಿ ಕರೆದೊಯ್ದು ಇಬ್ಬರನ್ನು ಕ್ಯಾನಲ್‌ಗೆ ಎಸೆದ ಪಾಪಿ ತಂದೆ!

ಶಹಾಪುರ (ಯಾದಗಿರಿ): ಗಂಡ ಹೆಂಡತಿ ಜಗಳ ಉಂಡು ಮಲಗುವ ತನಕ ಎನ್ನುತ್ತಾರೆ. ಆದರೆ, ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ಗೋಗಿ ಗ್ರಾಮದಲ್ಲಿ ನಡೆದ ಗಂಡ ಹೆಂಡತಿಯ ಜಗಳ, ತಾವೇ ಜನ್ಮ ಕೊಟ್ಟ ಮಕ್ಕಳನ್ನ ಕೊಲೆ ಮಾಡುವ ತನಕ ಹೋಗಿದೆ. ಹೌದು, ಶಹಾಪುರ ತಾಲೂಕಿನ ಗಂಗನಾಳ್ ಗ್ರಾಮದ ಶಾಂತಪ್ಪ ಬಿರೆದಾರ್ ಎಂಬಾತ ಹೆಂಡತಿ ಜೊತೆಗೆ ಜಗಳ ಮಾಡಿಕೊಂಡು, ತನ್ನ ಇಬ್ಬರು ಮಕ್ಕಳನ್ನು ಕಾಲುವೆಗೆ (ಕ್ಯಾನಲ್) ಎಸೆದಿರುವ ಆಘಾತಕಾರಿ ಘಟನೆ ನಡೆದಿದೆ. ಗಂಗನಾಳ್ ಗ್ರಾಮದಲ್ಲಿ ಗಾರೆ ಕೆಲಸ ಮಾಡಿಕೊಂಡಿದ್ದ, ಕಕ್ಕಸಗೇರ ಗ್ರಾಮದ ನಿವಾಸಿಯಾದ ಶಾಂತಪ್ಪ ಬಿರೆದಾರ್ ಮತ್ತು ಆತನ ಪತ್ನಿ ರೇಣುಕಾ ನಡುವೆ, ಮಂಗಳವಾರ ಸಂಜೆ ತೀವ್ರ ಕೌಟುಂಬಿಕ ಕಲಹ ಉಂಟಾಗಿದೆ. ಇದರಿಂದ ತೀವ್ರ ಕೋಪಗೊಂಡ ಶಾಂತಪ್ಪ, ತನ್ನ ಮೂವರು ಮಕ್ಕಳನ್ನು ಬೈಕ್ ಮೇಲೆ ಕೂರಿಸಿಕೊಂಡು ಹೋಗಿ, ಗೋಗಿ ಗ್ರಾಮದ ಬಳಿ ಇರುವ ಬೋರುಕ ಕಂಪನಿ ಹತ್ತಿರದ ಕ್ಯಾನಲ್‌ಗೆ ತಾನೇ ಜನ್ಮ ನೀಡಿದ ಇಬ್ಬರು ಮಕ್ಕಳನ್ನು ಎಸೆದಿದ್ದಾನೆ. ಇನ್ನು, ಮೃತರನ್ನು 9 ವರ್ಷದ ಸಾನ್ವಿ ಮತ್ತು 2 ವರ್ಷದ ಸೃಜನ್ ಎಂದು ಗುರುತಿಸಲಾಗಿದೆ.

ಹೆಂಡತಿ ಜೊತೆ ಜಗಳವಾಡಿ ಮೂವರು ಮಕ್ಕಳನ್ನು ಬೈಕ್‌ನಲ್ಲಿ ಕೂರಿಸಿಕೊಂಡು ತೆರಳಿದ್ದ ಶಾಂತಪ್ಪ ಬಿರೆದಾರ್, ಈ ಪೈಕಿ ಇಬ್ಬರು ಮಕ್ಕಳನ್ನ ಕಾಲುವೆಗೆ ಬಿಸಾಡಿದ್ದಾನೆ. ಆದರೆ, ಓರ್ವ ಮಗಳನ್ನು ಅಲ್ಲಿಂದ ವಾಪಸ್ ಕರೆತಂದು ತಾಯಿಗೆ ಒಪ್ಪಿಸಿದ್ದ ಎನ್ನಲಾಗ್ತಿದೆ. ಏತನ್ಮಧ್ಯೆ, ಆರೋಪಿ ಶಾಂತಪ್ಪ ಬಿರೆದಾರ್, ಪೊಲೀಸರ ಎದುರು ತಾನೇ ಮಕ್ಕಳನ್ನು ಕಾಲುವೆಗೆ ಎಸೆದಿದ್ದಾಗಿ ಒಪ್ಪಿಕೊಂಡಿದ್ದಾನೆ. ಇನ್ನು, ಗೋಗಿ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಿಸಿ, ಆರೋಪಿ ತಂದೆಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಮತ್ತೊಂದೆಡೆ, ಮಕ್ಕಳಿಗಾಗಿ ಕಾಲುವೆಯಲ್ಲಿ ಪೊಲೀಸರು ಮತ್ತು ರಕ್ಷಣಾ ಸಿಬ್ಬಂದಿ ಇನ್ನು ಕೂಡ ಶೋಧ ಕಾರ್ಯ ನಡೆಸುತ್ತಿದ್ದಾರೆ.

# ಭೂರಹಿತ ಕೃಷಿ ಕಾರ್ಮಿಕರು, ರೈತರಿಗೆ ಹಕ್ಕುಪತ್ರ ನೀಡಿ: ವಿ.ಎಸ್. ಶಿವಶಂಕರ್

## ಅಕ್ರಮ ಜಮೀನು ನೋಂದಣಿ ಕುರಿತು ಸಮಗ್ರ ತನಿಖೆಗೆ ಆಗ್ರಹ

ಬಳ್ಳಾರಿ, ಆ.19: ಭೂರಹಿತ ಕೃಷಿ ಕಾರ್ಮಿಕರು ಹಾಗೂ ರೈತರಿಗೆ ಭೂಮಿ ಮತ್ತು ಹಕ್ಕುಪತ್ರ ಒದಗಿಸುವಂತೆ ಆಗ್ರಹಿಸಿ ಕರ್ನಾಟಕ ಪ್ರಾಂತ ರೈತ ಸಂಘದ ಬಳ್ಳಾರಿ ಜಿಲ್ಲಾ ಸಮಿತಿ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಹಗಲು-ರಾತ್ರಿ ಧರಣಿ ಸತ್ಯಾಗ್ರಹ ಆರಂಭಿಸಲಾಯಿತು.

ಧರಣಿಯಲ್ಲಿ ಭಾಗವಹಿಸಿ ಮಾತನಾಡಿದ ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ವಿ.ಎಸ್. ಶಿವಶಂಕರ್, ಭೂರಹಿತ ಕೃಷಿ ಕಾರ್ಮಿಕರು ಹಾಗೂ ರೈತರ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಸಂಘಟನೆ ನಿರಂತರವಾಗಿ ಹೋರಾಟ ನಡೆಸುತ್ತಿದೆ. ರಸಗೊಬ್ಬರ, ಬೆಳೆ ಪರಿಹಾರ, ಸಾಲಮನ್ನಾ, ಬೆಂಬಲ ಬೆಲೆ ಹಾಗೂ ಸಾಗುವಳಿ ರೈತರಿಗೆ ಹಕ್ಕುಪತ್ರ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

ಸಿರುಗುಪ್ಪ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಗೈರು ಪಟ್ಟಾದಾರರ ಹೆಸರಿನಲ್ಲಿರುವ ಜಮೀನುಗಳಲ್ಲಿ ಹಲವು ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ಭೂರಹಿತ ಕೃಷಿ ಕಾರ್ಮಿಕರು ಹಾಗೂ ಅರ್ಹ ರೈತರಿಗೆ ಕೂಡಲೇ ಹಕ್ಕುಪತ್ರ ನೀಡಬೇಕು. ಕಂದಾಯ ಇಲಾಖೆ ಈ ಕುರಿತು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

**300 ಎಕರೆಗೂ ಹೆಚ್ಚು ಜಮೀನು ವಹಿವಾಟಿನ ಆರೋಪ :** ಸಿರುಗುಪ್ಪ ತಾಲೂಕಿನ ಹಳೇಕೋಟೆ, ದೇವಲಾಪುರ, ಸಿರಿಗೇರಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಜಮೀನುಗಳ ದಾಖಲೆಗಳಿಗೆ ಸಂಬಂಧಿಸಿದಂತೆ ಅಕ್ರಮಗಳು ನಡೆದಿವೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಮೂಲ ಪಟ್ಟಾದಾರರ ಅನುಪಸ್ಥಿತಿಯಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿ, ಸಂಬಂಧಿಕರು ಹಾಗೂ



ಇತರರ ಹೆಸರಿಗೆ ಕೆಲವು ಜಮೀನುಗಳನ್ನು ನೋಂದಣಿ ಮಾಡಲಾಗಿದೆ.

ಈ ಮೂಲಕ 300 ಎಕರೆಗೂ ಹೆಚ್ಚು ಜಮೀನುಗಳ ವಹಿವಾಟು ನಡೆದಿರುವ ಆರೋಪದ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಮುಖಂಡರು ಆಗ್ರಹಿಸಿದರು.

ಜಮೀನುಗಳ ನೋಂದಣಿ ಪ್ರಕ್ರಿಯೆಯಲ್ಲಿ ಅಧಿಕಾರಿಗಳ ಪಾತ್ರದ ಬಗ್ಗೆಯೂ ತನಿಖೆ ನಡೆಸಬೇಕು. ಅಕ್ರಮ ನೋಂದಣಿಗೆ ಕಾರಣರಾದ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ವ್ಯಕ್ತಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರೈತರ ಹೋರಾಟವನ್ನು ಹತ್ತಿಕ್ಕುವ ಉದ್ದೇಶದಿಂದ ರೈತರ ವಿರುದ್ಧ ಸುಳ್ಳು ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಆರೋಪಿಸಿದ ಮುಖಂಡರು, ರೈತರ ಮೇಲಿನ ಪ್ರಕರಣಗಳನ್ನು ರದ್ದುಪಡಿಸಬೇಕು ಎಂದು ಆಗ್ರಹಿಸಿದರು.

**ಪ್ರಮುಖ ಬೇಡಿಕೆಗಳು**

**ಸಿರುಗುಪ್ಪ ಉಪ ನೋಂದಣಿ ಕಚೇರಿಯ ಅಧಿಕಾರಿಯ ವಿರುದ್ಧ ತನಿಖೆ ನಡೆಸಿ, ತಪ್ಪಿತಸ್ಥರೆಂದು ಸಾಬೀತಾದಲ್ಲಿ ಕಾನೂನು ಕ್ರಮ ಕೈಗೊಳ್ಳಬೇಕು.**

**ತೆಕ್ಕಲಕೋಟೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ 74/2026 ಪ್ರಕರಣವನ್ನು ರದ್ದುಪಡಿಸಬೇಕು.**

**ಗೈರು ಪಟ್ಟಾದಾರರ ಜಮೀನುಗಳಲ್ಲಿ ಸಾಗುವಳಿ ಮಾಡುತ್ತಿರುವ ಅರ್ಹ ರೈತರಿಗೆ ಹಕ್ಕುಪತ್ರ ನೀಡಬೇಕು.**

**ಸರ್ಕಾರ ಕೂಡಲೇ ಫಾರಂ-1 ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಬೇಕು.**

**ಜಮೀನುಗಳ ಅಕ್ರಮ ನೋಂದಣಿ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು.**

ಧರಣಿಯಲ್ಲಿ ಕೆಪಿಆರ್‌ಎಸ್ ಜಿಲ್ಲಾಧ್ಯಕ್ಷ ಗಾಳಿ ಬಸವರಾಜ್, ಜಿಲ್ಲಾ ಉಪಾಧ್ಯಕ್ಷರಾದ ವಿ.ಎಸ್. ಶಿವಶಂಕರ್, ವಿ. ಮಾರುತಿ, ಜೆ.ಎಂ. ಚನ್ನಬಸಯ್ಯ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ. ಖಲಂದರ್ ಭಾಷ, ಜಿಲ್ಲಾ ಸಹ ಕಾರ್ಯದರ್ಶಿ ಜಿ. ಪಂಪನಗೌಡ, ದುರುಗಪ್ಪ ಸೇರಿದಂತೆ ಜಿಲ್ಲಾ ಸಮಿತಿ ಸದಸ್ಯರು ಹಾಗೂ ರೈತರು ಭಾಗವಹಿಸಿದ್ದರು.

ಧರಣಿಗೆ ಡಿವೈಎಫ್‌ಐ, ಸಿಐಟಿಯು, ಕರ್ನಾಟಕ ರಾಜ್ಯ ವಿಮುಕ್ತಿ ದೇವದಾಸಿ ಮಹಿಳಾ ಸಂಘಟನೆ, ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ಕಾರ್ಮಿಕರ ಸಂಘಟನೆ, ಬಿಸಿಯೂಟ ನೌಕರರ ಸಂಘಟನೆ, ಅಂಗನವಾಡಿ ಕಾರ್ಯಕರ್ತರ ಸಂಘಟನೆ ಹಾಗೂ ಮಾನವ ಬಂಧುತ್ವ ವೇದಿಕೆ ಸೇರಿದಂತೆ ವಿವಿಧ ಸಂಘಟನೆಗಳು ಬೆಂಬಲ ವ್ಯಕ್ತಪಡಿಸಿದವು.

ಬೇಡಿಕೆಗಳು ಈಡೇರುವವರೆಗೆ ಹಗಲು-ರಾತ್ರಿ ಧರಣಿ ಸತ್ಯಾಗ್ರಹ ಮುಂದುವರಿಸುವುದಾಗಿ ಕರ್ನಾಟಕ ಪ್ರಾಂತ ರೈತ ಸಂಘದ ಮುಖಂಡರು ತಿಳಿಸಿದರು.

# ಆ.20 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ : ಬಳ್ಳಾರಿ ನಗರ ಜೆಸ್ಕಾಂ 110/11 ಕೆ.ವಿ ದಕ್ಷಿಣ ಉಪ-ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ 11ಕೆ.ವಿ ಫೀಡರ್ ನ ಮಾರ್ಗದಲ್ಲಿ ರಸ್ತೆ ಅಗಲೀಕರಣ ಕಾಮಗಾರಿ ಕೈಗೊಂಡಿರುವುದರಿಂದ ಆ.20 ರಂದು ಬೆಳಿಗ್ಗೆ 09 ರಿಂದಿ ಸಂಜೆ 06 ಗಂಟೆಯವರೆಗೆ ಎಫ್-27 ರ ವ್ಯಾಪ್ತಿಯ ಆಂಧ್ರಾಳ್-ಕಣೆಕಲ್ಲು ರಸ್ತೆ, ಮಂಡಾಳು ಬಟ್ಟಿ ಏರಿಯಾ, ಮಂಗಮ್ಮ ಕ್ಯಾಂಪ್, ಚರಕುಂಟ ಗ್ರಾಮ, ಇಬ್ರಾಹಿಂಪುರ ರಸ್ತೆ ಮತ್ತು ಎಫ್-47 ರ ವ್ಯಾಪ್ತಿಯ ಆಂಧ್ರಾಳ್ ರಸ್ತೆ, ಕೊಲ್ಮಿ ಚೌಕ್ ಮತ್ತು ಮಿಲ್ಲರ್ ಪೇಟೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬಳ್ಳಾರಿ ಗ್ರಾಮೀಣ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿ ನಿಲಯಕ್ಕೆ ಬಾಡಿಗೆ ಕಟ್ಟಡ ಬೇಕಾಗಿದೆ

ಬಳ್ಳಾರಿ : ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಂಪ್ಲಿ ಪಟ್ಟಣದ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿಗಳ ವಾಸಕ್ಕೆ ಬಾಡಿಗೆ ಕಟ್ಟಡ ಬೇಕಾಗಿದ್ದು, ಆಸಕ್ತ ಮಾಲೀಕರು ಸಂಪರ್ಕಿಸಬಹುದಾಗಿದೆ.

ವಸತಿ ನಿಲಯದ ಕಟ್ಟಡವು ತುಂಬಾ ಹಳೆಯದಾಗಿದ್ದು, ವಿದ್ಯಾರ್ಥಿ ನಿಲಯದಲ್ಲಿನ ವಿದ್ಯಾರ್ಥಿಗಳ ಆರೋಗ್ಯ ಮತ್ತು ಶೈಕ್ಷಣಿಕ ಹಿತದೃಷ್ಟಿಯಿಂದ 150 ವಿದ್ಯಾರ್ಥಿಗಳ ವಾಸಕ್ಕೆ ಅನುಕೂಲಕರವಾಗಿರುವ ಬಾಡಿಗೆ ಕಟ್ಟಡದ ಅವಶ್ಯವಿದ್ದು, ಕಟ್ಟಡ ಒದಗಿಸಲು ಆಸಕ್ತ ಹೊಂದಿರುವ ಮಾಲೀಕರು ಕಟ್ಟಡದ ಸೂಕ್ತ ದಾಖಲಾತಿಗಳೊಂದಿಗೆ ಸಹಾಯಕ ನಿರ್ದೇಶಕರು (ಗ್ರೇಡ್-1), ಸಮಾಜ ಕಲ್ಯಾಣ ಇಲಾಖೆ, ಬಳ್ಳಾರಿ, ಇವರ ಕಚೇರಿಗೆ ಭೇಟಿ ನೀಡಬಹುದು.

# ಕಾವೇರಿ ನೀರು ವಿವಾದ: ಸರ್ಕಾರಕ್ಕೆ ಎಲ್ಲವೂ ಗೊತ್ತಿದೆ, ನಾವು ರೈತರ ವಿರುದ್ಧವಲ್ಲ- ಸಚಿವ ಚಲುವರಾಯಸ್ವಾಮಿ

ಬೆಂಗಳೂರು: ಕಾವೇರಿ ನದಿ ನೀರು ಹಂಚಿಕೆ ವಿಚಾರವಾಗಿ ಮಂಡ್ಯ ಹಾಗೂ ಕಾವೇರಿ ಜಲಾನಯನ ಪ್ರದೇಶದ ರೈತರು ನಡೆಸುತ್ತಿರುವ ಪ್ರತಿಭಟನೆಗಳ ಬಗ್ಗೆ ರಾಜ್ಯ ಸರ್ಕಾರಕ್ಕೆ ಅರಿವಿದೆ. ರೈತರ ಸಮಸ್ಯೆಗಳನ್ನು ಸರ್ಕಾರ ಅರ್ಥಮಾಡಿಕೊಂಡಿದ್ದು, ರೈತರ ವಿರುದ್ಧ ಸರ್ಕಾರವಿಲ್ಲ ಎಂದು ಸಚಿವ ಎನ್. ಚಲುವರಾಯಸ್ವಾಮಿ ಬುಧವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಅಘಒಂ) ನೀಡುವ ಆದೇಶಕ್ಕಾಗಿ ಕಾಯಬೇಕು ಎಂದು ರೈತರಿಗೆ ಮನವಿ ಮಾಡಿದರು.

ಮಂಡ್ಯ ಹಾಗೂ ಕಾವೇರಿ ಭಾಗದ ರೈತರ ಆತಂಕಗಳು ಸರ್ಕಾರದ ಗಮನದಲ್ಲಿದ್ದು, ಅವರ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.



ಮಂಡ್ಯ ಹಾಗೂ ಕಾವೇರಿ ಜಲಾನಯನ ಪ್ರದೇಶದ ರೈತರು ಪ್ರತಿಭಟನೆ ನಡೆಸುತ್ತಿರುವುದು ನನಗೆ ಗೊತ್ತಿದೆ. ಆದರೆ, ನಾವು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶಕ್ಕಾಗಿ ಕಾಯಬೇಕಾಗಿದೆ. ನಾವು ರೈತರ ವಿರುದ್ಧವಲ್ಲ. ಮಂಡ್ಯ ಸೇರಿದಂತೆ ಇತರ ಭಾಗಗಳ ರೈತರ ಸಮಸ್ಯೆಗಳು ನಮಗೆ ತಿಳಿದಿವೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೂ ಈ ವಿಚಾರದ ಬಗ್ಗೆ ಸಂಪೂರ್ಣ ಅರಿವಿದೆ. ಅವರೂ ಇದೇ ಕಾವೇರಿ ಭಾಗದಿಂದ ಬಂದವರು" ಎಂದು ಹೇಳಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇಂದು ದೆಹಲಿಗೆ ತೆರಳುತ್ತಿದ್ದು, ಬಳಿಕ ಚೆನ್ನೈನಲ್ಲಿ ತಮಿಳುನಾಡು ಮುಖ್ಯಮಂತ್ರಿ ಅವರನ್ನು ಭೇಟಿಯಾಗುವ ನಿರೀಕ್ಷೆಯಿದೆ. "ಒಳ್ಳೆಯದಾಗಲಿ ಎಂದು ಆಶಿಸೋಣ" ಎಂದರು.

ಇದೇ ವೇಳೆ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಕುರಿತು ನೀಡಿರುವ ಹೇಳಿಕೆಗೆ ಚಲುವರಾಯಸ್ವಾಮಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಕುಮಾರಸ್ವಾಮಿ ಅವರ ಹೇಳಿಕೆಯನ್ನು "ನಾಚಿಕೆಗೇಡಿನ ಹಾಗೂ ಆಕ್ಷೇಪಾರ್ಹ ಹೇಳಿಕೆ" ಎಂದು ಟೀಕಿಸಿದರು.

ಕುಮಾರಸ್ವಾಮಿ ಅವರಂತಹ ವ್ಯಕ್ತಿಯಿಂದ ಇಂತಹ ಹೇಳಿಕೆ ಬಂದಿರುವುದು ನಾಚಿಕೆಗೇಡಿನ ಸಂಗತಿ. ಅವರು ಎರಡು ಬಾರಿ ಕರ್ನಾಟಕದ ಮುಖ್ಯಮಂತ್ರಿಯಾಗಿದ್ದವರು. ದೊಡ್ಡ ಕುಟುಂಬದಿಂದ ಬಂದವರು. ಜೊತೆಗೆ ಕೇಂದ್ರ ಸಚಿವರಾಗಿಯೂ ಸೇವೆ ಸಲ್ಲಿಸಿದ್ದಾರೆ. ಇಂತಹ ವ್ಯಕ್ತಿ ಈ ರೀತಿಯ ಅವಹೇಳನಕಾರಿ ಹೇಳಿಕೆ ನೀಡುವುದು ಅತ್ಯಂತ ಆಕ್ಷೇಪಾರ್ಹ ಎಂದು ಹೇಳಿದರು.

ಸೋನಿಯಾ ಗಾಂಧಿ ಭಾರತವನ್ನು ತಮ್ಮ ದೇಶವನ್ನಾಗಿ ಸ್ವೀಕರಿಸಿ ಭಾರತೀಯರಾಗಿದ್ದಾರೆ. ಅವರನ್ನು ಕುರಿತು ಇಂತಹ ಹೇಳಿಕೆಗಳನ್ನು ನೀಡುವುದು ಸರಿಯಲ್ಲ ಎಂದು ತಿಳಿಸಿದರು.

# ಬೈಕ್‌ಗಳು ಮುಖಾಮುಖಿ ಡಿಕ್ಕಿ;

## ಮಗುವಿಗೆ ಔಷಧಿ ತರುತ್ತಿದ್ದ ವ್ಯಕ್ತಿ ಸೇರಿ ಇಬ್ಬರು ಸಾವು



ದಾವಣಗೆರೆ: ತಾಲೂಕಿನ ಕೈದಾಳೆ-ಕುಕ್ಕುವಾಡ ಕ್ರಾಸ್ ಬಳಿ ಎರಡು ಬೈಕ್‌ಗಳ ನಡುವೆ ಮುಖಾಮುಖಿ ಡಿಕ್ಕಿಯಾಗಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಕರೆಕಟ್ಟೆ ಗ್ರಾಮದ ಯೂಸುಫ್ ಖಾನ್ (33), ಹೊಸ ಬೆಳವನೂರು ಗ್ರಾಮದ ಅಣ್ಣಪ್ಪ (43) ಮೃತರು. ದಾವಣಗೆರೆ ಕಡೆಯಿಂದ ಬರುತ್ತಿದ್ದ ಯೂಸುಫ್ ಖಾನ್, ಚನ್ನಗಿರಿ ಕಡೆಯಿಂದ ಬರುತ್ತಿದ್ದ ಅಣ್ಣಪ್ಪ ಬೈಕ್‌ಗಳು ಮುಖಾಮುಖಿ ಡಿಕ್ಕಿಯಾಗಿ ಅಪಘಾತ ಸಂಭವಿಸಿತ್ತು. ಅನಾರೋಗ್ಯದಿಂದ ಬಳಲುತ್ತಿದ್ದ ತನ್ನ ಮಗುವಿಗೆ ಔಷಧಿ ತರಲು ಯೂಸುಫ್ ಖಾನ್ ಬೈಕ್‌ನಲ್ಲಿ ತೆರಳುತ್ತಿದ್ದರು. ದಾವಣಗೆರೆಗೆ ಹೋಗಿ ಔಷಧಿ ತರುವಾಗ ಎದುರಿಗೆ ಬರುತ್ತಿದ್ದ ಬೈಕ್‌ಗೆ ಡಿಕ್ಕಿಯಾಗಿದೆ. ಅಪಘಾತದಲ್ಲಿ ಇಬ್ಬರೂ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಹದಡಿ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ.

# ಪ್ರಿಯಕರನೊಂದಿಗೆ ಸೇರಿ ಪತಿ ಕೊಲೆ; ಮೃತದೇಹ ತುಂಗಭದ್ರಾ ನದಿಗೆ ಬಿಸಾಕಿದ ಪತ್ನಿ

ದಾವಣಗೆರೆ: ಅಕ್ರಮ ಸಂಬಂಧದ ಅಡ್ಡಿಯಾಗಿದ್ದಕ್ಕೆ ಪತ್ನಿಯೇ ಪ್ರಿಯಕರನ ಜೊತೆಸೇರಿ ಗಂಡನನ್ನು ಕೊಲೆ ಮಾಡಿ, ಬಳಿಕ ಮೃತದೇಹವನ್ನು ತುಂಗಭದ್ರಾ ನದಿಗೆ ಬಿಸಾಕಿರುವ ಘಟನೆ ದಾವಣಗೆರೆ ತಾಲೂಕಿನ ಪಾಮೇನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಪಾಮೇನಹಳ್ಳಿ ಗ್ರಾಮದ ರಘು (36) ಕೊಲೆಯಾದ ದುರ್ದೈವಿ. ಆತನ ಪತ್ನಿ ಶೃತಿ ಹಾಗೂ ಆಕೆಯ ಪ್ರಿಯಕರ ಉಬೇದುಲ್ಲಾ ಕೊಲೆ ಆರೋಪಿಗಳು.

ರಘು ಹಾಗೂ ಶೃತಿ ಕಳೆದ 12 ವರ್ಷಗಳ ಹಿಂದೆ ಮದುವೆಯಾಗಿದ್ದರು. ರಘುವಿನ ಕುಡಿತದ ಚಟದಿಂದ ಇಬ್ಬರ ನಡುವೆ ಆಗಾಗ ಜಗಳ ನಡೆಯುತ್ತಿತ್ತು. ಅಷ್ಟೇ ಅಲ್ಲ ಕಳೆದ 2-3 ವರ್ಷಗಳಿಂದ ಶೃತಿ ಹಾಗೂ ಉಬೇದುಲ್ಲಾ ನಡುವೆ ಅಕ್ರಮ ಸಂಬಂಧವಿತ್ತು.

ಈ ಸಂಬಂಧದಿಂದಾಗಿ ಶೃತಿಗೆ ಪತಿಯೊಂದಿಗೆ ಸಂಸಾರ ನಡೆಸಲು ಕಿರಿಕಿರಿ ಆಗುತ್ತಿತ್ತು. ಹೀಗಾಗಿ ಪ್ರಿಯಕರ ಉಬೇದುಲ್ಲಾ ಜೊತೆ ಸೇರಿ ರಘುವನ್ನು ಕತ್ತು ಹಿಸುಕಿ ಕೊಲೆ ಮಾಡಿದ್ದಾರೆ. ಕೊಲೆ ಬಳಿಕ ಉಬೇದುಲ್ಲಾ ಹಾಗೂ ಆತನ ಸ್ನೇಹಿತ ಸುರೇಶ್ ಸೇರಿಕೊಂಡು ರಘುವಿನ ಮೃತದೇಹವನ್ನು ತುಂಗಭದ್ರಾ ನದಿಗೆ ಬಿಸಾಕಿದ್ದಾರೆ. ಇತ್ತ ರಘು ಕಾಣೆಯಾಗಿರುವ




ಬಗ್ಗೆ ದೂರು ದಾಖಲಾಗಿತ್ತು. ಪ್ರಕರಣದ ತನಿಖೆ ವೇಳೆ ಶೃತಿಯ ಸಹೋದರಿಯನ್ನು ಪೊಲೀಸರು ವಿಚಾರಣೆ ನಡೆಸಿದಾಗ ಹಲವು ಅನುಮಾನಗಳು ಮೂಡಿವೆ. ಬಳಿಕ ವಿಚಾರಣೆ ತೀವ್ರಗೊಳಿಸಿದಾಗ ಪ್ರಕರಣದ ಸತ್ಯ ಹೊರಬಂದಿದೆ.

ಸದ್ಯ ರಘುವಿನ ಕೊಲೆ ಹಾಗೂ ಮೃತದೇಹ ಸಾಗಿಸಿದ ಆರೋಪದಲ್ಲಿ ಶೃತಿ, ಉಬೇದುಲ್ಲಾ ಹಾಗೂ ಸುರೇಶ್ ಸೇರಿ ಮೂವರನ್ನು ಪೊಲೀಸರು ಬಂಧಿಸಿದ್ದಾರೆ. ಮೃತದೇಹಕ್ಕಾಗಿ ತುಂಗಭದ್ರಾ ನದಿಯಲ್ಲಿ ಪೊಲೀಸರು ಶೋಧ ಕಾರ್ಯ ನಡೆಸುತ್ತಿದ್ದಾರೆ. ಈ ಸಂಬಂಧ ಹದಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ

# ಫುಟ್‌ಪಾತ್ ಮೇಲೆ ಮತ್ತೆ ಅಂಗಡಿ ಹಾಕಿದ್ರೆ ಸಾಮಗ್ರಿಗಳನ್ನ ಜಪ್ತಿ ಮಾಡಿ, ದುಪ್ಪಟ್ಟು ದಂಡ ವಿಧಿಸಿ: ಕೃಷ್ಣ ಬೈರೇಗೌಡ ಖಡಕ್ ಸೂಚನೆ

ಬೆಂಗಳೂರು: ರಾಜ್ಯ ಸರ್ಕಾರ ರಾಜಧಾನಿ ಬೆಂಗಳೂರಿನಲ್ಲಿ ಸೇಫ್ ಫುಟ್‌ಪಾತ್ ಅಭಿಯಾನ ಆರಂಭಿಸಿ, ಶಿವಾಜಿನಗರ ಸೇರಿದಂತೆ ಬೆಂಗಳೂರಿನ ಪ್ರಮುಖ ರಸ್ತೆಗಳಲ್ಲಿ ಫುಟ್‌ಪಾತ್ ಒತ್ತುವರಿ ತೆರವುಗೊಳಿಸಿತ್ತು. ಆದರೆ ಹಲವು ವ್ಯಾಪಾರಿಗಳು ಮತ್ತೆ ಪಾದಚಾರಿ ಮಾರ್ಗಗಳನ್ನು ಆಕ್ರಮಿಸಿಕೊಂಡಿದ್ದು, ಇದರಿಂದ ಪಾದಚಾರಿಗಳು ಮತ್ತೆ ರಸ್ತೆಯಲ್ಲೇ ನಡೆದುಕೊಂಡು ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ.

ನಗರದ ಹಲವು ಕಡೆ ಮತ್ತೆ ಫುಟ್‌ಪಾತ್ ಮೇಲೆ ಅಂಗಡಿಗಳು ಆರಂಭವಾಗಿದ್ದು, ಅಂತವರಿಗೆ ದುಪ್ಪಟ್ಟು ದಂಡ ವಿಧಿಸಿ ಮತ್ತು ಅವರ ಸಾಮಗ್ರಿಗಳನ್ನ ಜಪ್ತಿ ಮಾಡುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ಅವರು ಬುಧವಾರ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿ-ದ್ದಾರೆ.



ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಇದುವರೆಗೆ 964 ಕಿ.ಮೀ. ಪಾದಚಾರಿ ಮಾರ್ಗಗಳ ಒತ್ತುವರಿ ತೆರವುಗೊಳಿಸಲಾಗಿದ್ದು, ಬಾಕಿ ಇರುವ ಒತ್ತುವರಿಯನ್ನ ಆಗಸ್ಟ್ ತಿಂಗಳೊಳಗಾಗಿ ತೆರವುಗೊಳಿಸುವಂತೆ ಅಧಿಕಾರಿಗಳು ಸಚಿವರು ಸೂಚನೆ ನೀಡಿದ್ದಾರೆ.

ಇಂದು ಜಿಬಿಎ ವ್ಯಾಪ್ತಿಯಲ್ಲಿ 'ಪಾದಚಾರಿ ಮಾರ್ಗಗಳ ಒತ್ತುವರಿ ತೆರವು', 'ತ್ಯಾಜ್ಯದಿಂದ ಸ್ವಾತಂತ್ರ್ಯ' ಹಾಗೂ 'ಬಿಡಾಡಿ ವಾಹನಗಳ ತೆರವು ಕಾರ್ಯಾಚರಣೆ' ಕುರಿತು ನಡೆದ ವರ್ಚುವಲ್ ಸಭೆಯನ್ನ ಉದ್ದೇಶಿಸಿ ಮಾತನಾಡಿದ ಸಚಿವರು, ನಗರದಲ್ಲಿ ಸುಮಾರು 1,500 ಕಿ.ಮೀ. ಉದ್ದದ ಆರ್ಟಿರಿಯಲ್ ಹಾಗೂ ಸಬ್-ಆರ್ಟಿರಿಯಲ್ ಪ್ರಮುಖ ರಸ್ತೆಗಳಲ್ಲಿ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಗುತ್ತಿದೆ. ಈ ಪೈಕಿ ಈವರೆಗೆ 964 ಕಿ.ಮೀ. ಉದ್ದದ ಪಾದಚಾರಿ ಮಾರ್ಗಗಳಲ್ಲಿನ ಒತ್ತುವರಿಗಳನ್ನು ತೆರವುಗೊಳಿಸಲಾಗಿದೆ. ಬಾಕಿ ಇರುವ ಪಾದಚಾರಿ ಮಾರ್ಗಗಳ ಒತ್ತುವರಿಯನ್ನು ಇದೇ ತಿಂಗಳೊಳಗಾಗಿ ತೆರವುಗೊಳಿಸುವಂತೆ ನಿರ್ದೇಶನ ನೀಡಿದರು.

ನಗರದಲ್ಲಿ ಪಾದಚಾರಿ ಮಾರ್ಗಗಳ ಒತ್ತುವರಿ ತೆರವುಗೊಳಿಸಿರುವ ಸ್ಥಳಗಳಲ್ಲಿಯೇ ಬೀದಿ ಬದಿ ವ್ಯಾಪಾರಿಗಳು ಮತ್ತೆ ಬಂದು ವ್ಯಾಪಾರ ಮುಂದುವರಿಸುತ್ತಿರುವುದು ಕಂಡುಬರುತ್ತಿದೆ. ಈ ಕುರಿತು ಕಟ್ಟುನಿಟ್ಟಿನ ಕ್ರಮ ಕೈಗೊಂಡು, ಪುನಃ ಒತ್ತುವರಿ ಮಾಡಿಕೊಂಡು ವ್ಯಾಪಾರ ನಡೆಸುವವರ ಸಾಮಗ್ರಿಗಳನ್ನ ಜಪ್ತಿ ಮಾಡಿ, ಅವರಿಗೆ ದುಪ್ಪಟ್ಟು ದಂಡ ವಿಧಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕಾರ್ಯಾಚರಣೆ ಪರಿಣಾಮಕಾರಿಯಾಗಿ ನಡೆಯಬೇಕು. ಒತ್ತುವರಿ ತೆರವುಗೊಳಿಸಿರುವ ಸ್ಥಳಗಳಲ್ಲಿ ಅಧಿಕಾರಿಗಳು ನಿರಂತರವಾಗಿ ಮೇಲ್ವಿಚಾರಣೆ ನಡೆಸಬೇಕು. ಈ ನಿಟ್ಟಿನಲ್ಲಿ ಸದ್ಯದಲ್ಲಿಯೇ ಪಾಲಿಕೆ ಹಾಗೂ ಪೊಲೀಸ್ ಅಧಿಕಾರಿಗಳೊಂದಿಗೆ ಜಂಟಿ ಸಭೆ ನಡೆಸಲಾಗುವುದು ಎಂದು ತಿಳಿಸಿದರು.

# ನಿಗದಿತ ಉದ್ದೇಶಕ್ಕೆ ಸರ್ಕಾರದ ಭೂಮಿ ಬಳಕೆ ಆಗದೇ ಹೋದ್ರೆ ಭೂಮಿ ವಾಪಸ್: ಪರಮೇಶ್ವರ್



ಬೆಂಗಳೂರು: ಶಿಕ್ಷಣ ಸಂಸ್ಥೆಗಳು, ಸಂಘ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳಿಗೆ ಸರ್ಕಾರ ಕೊಟ್ಟಿರುವ ಭೂಮಿಯನ್ನ ನಿಗದಿತ ಉದ್ದೇಶಕ್ಕೆ ಬಳಕೆ ಮಾಡದೇ ಹೋದರೆ ಸರ್ಕಾರ ಅದನ್ನ ಮರುವಶಪಡಿಸಿಕೊಳ್ಳಲಿದೆ ಎಂದು ಡಿಸಿಎಂ ಪರಮೇಶ್ವರ್ ತಿಳಿಸಿದ್ದಾರೆ.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್‌ನ ಶಿವಕುಮಾರ್ ಪ್ರಶ್ನೆ ಕೇಳಿದ್ರು. ಕೊಟ್ಟಿರುವ ಸಂಘ ಸಂಸ್ಥೆಗಳಿಗೆ, ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರ ಭೂಮಿ ನೀಡುತ್ತಿದೆ. ಅವರು ಯಾವ ಉದ್ದೇಶಕ್ಕೆ ಅಂತ ಭೂಮಿ ಪಡೆದಿದ್ದರೋ ಅದಕ್ಕೆ ಬಳಕೆ ಮಾಡಿಕೊಳ್ತಿಲ್ಲ. ಧಾರ್ಮಿಕ ಸಂಘಗಳಿಗೆ ಸರ್ಕಾರ ಭೂಮಿ ನೀಡಬಾರದು ಅಂತ ಒತ್ತಾಯಿಸಿದ್ರು. ಇದಕ್ಕೆ ಡಿಸಿಎಂ ಪರಮೇಶ್ವರ್ ಉತ್ತರ ನೀಡಿ, ಸಂಘ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳಿಗೆ 2010–26ರವರೆಗೆ ಸರ್ಕಾರ ಜಮೀನು ನೀಡಲಾಗಿದೆ. ಸುಮಾರು 2,400 ಎಕರೆಗೂ ಹೆಚ್ಚು ಭೂಮಿ ಕೊಡಲಾಗಿದೆ. ಎಲ್ಲಾ ಸರ್ಕಾರಗಳು ಜಮೀನು ಕೊಟ್ಟಿವೆ. ಪಡೆದ ಉದ್ದೇಶಕ್ಕೆ ಜಮೀನುಗಳನ್ನು ಬಳಸಿಕೊಳ್ಳುತ್ತಿದ್ದಾರಾ? ಇಲ್ಲವಾ ಎಂದು ಪರಿಶೀಲನೆ ನಡೆಸಲು 2020ರಲ್ಲೇ ಡಿಸಿಗಳಿಗೆ ಸೂಚನೆ ನೀಡಲಾಗಿದೆ. ಯಾರು ಉಪಯೋಗ ಮಾಡಿಲ್ಲ ಅಥವಾ ಕೇಳಿದ ಉದ್ದೇಶಕ್ಕೆ ಬಳಕೆ ಆಗದೇ ಹೋದ್ರೆ ಆ ಜಮೀನು ವಾಪಸ್ ಪಡೆಯುತ್ತೇವೆ ಎಂದಿದ್ದಾರೆ.

ಸಂಘ ಸಂಸ್ಥೆಗಳಿಗೆ ಜಮೀನು ಕೊಡೋದಕ್ಕೆ ನಿಯಮ ಇದೆ. ಅದರ ಅನ್ವಯ ಭೂಮಿ ಕೊಡಲಾಗಿದೆ. ಯಾವ ಉದ್ದೇಶಕ್ಕೆ ಕೇಳಿದ್ರೋ ಅದಕ್ಕೆ ಬಳಕೆ ಮಾಡದೇ ಹೋದ್ರೆ ವಾಪಸ್ ಪಡೆಯುತ್ತೇವೆ ಅಂತ ಸ್ಪಷ್ಟಪಡಿಸಿದ್ದಾರೆ.

# ವಿಶ್ವಚೇತನ ಸೌಹಾರ್ದ ಸಹಕಾರಿ ಸಂಘಕ್ಕೆ 27.61 ಲಕ್ಷ ನಿವ್ವಳ ಲಾಭ




ಹಿರಿಯೂರು: ನಗರದ ಕೆನರಾ ಬ್ಯಾಂಕ್ ಮೇಲ್ಭಾಗದಲ್ಲಿರುವ ವಿಶ್ವಚೇತನ ಸೌಹಾರ್ದ ಸಹಕಾರಿ ಸಂಘವು 2025–26ನೇ ಸಾಲಿನಲ್ಲಿ 27.61 ಲಕ್ಷ ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಎ. ಲಕ್ಷ್ಮೀಪತಿ ತಿಳಿಸಿದರು.

ಹಮ್ಮಿಕೊಂಡಿದ್ದ ಸಂಘದ ಸರ್ವಸದಸ್ಯರ ವಾರ್ಷಿಕ ಮಹಾಸಭೆ ಹಾಗೂ ದಶಮಾನೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂಘದಲ್ಲಿ ದುಡಿಯುವ ಬಂಡವಾಳ 71.61 ಲಕ್ಷಕ್ಕೆ ವೃದ್ಧಿಸಿದ್ದು, ನಿಧಿಗಳ ಮೌಲ್ಯ 42.86 ಲಕ್ಷಕ್ಕೆ ಏರಿಕೆ–ಯಾಗಿದೆ. ಗ್ರಾಹಕರ ವಿಶ್ವಾಸದ ಕಾರಣಕ್ಕೆ ಠೇವಣಿ ಮೊತ್ತ 7.18 ಕೋಟಿಗೆ ಹೆಚ್ಚಿದೆ. ದುಡಿಯುವ ಬಂಡವಾಳ 10.7 ಕೋಟಿ ತಲುಪಿದ್ದು, ಪ್ರಸಕ್ತ ಸಾಲಿಗೆ ಸುಸ್ತಿ ಸಾಲದ ಪ್ರಮಾಣ ಶೇ 0.1 ರಷ್ಟಿದೆ. ಕಳೆದ ಸಾಲಿನಲ್ಲಿ ನೀಡಿ–ದಂತೆ ಈ ಬಾರಿಯೂ ಷೇರುದಾರರಿಗೆ ಶೇ 15 ರಷ್ಟು ಡಿವಿಡೆಂಟ್ ನೀಡುತ್ತಿದ್ದೇವೆ ಎಂದು ವಿವರಿಸಿದರು.

ಸಂಘದ ಉಪಾಧ್ಯಕ್ಷ ಎಸ್.ಜೆ. ರಾಘವೇಂದ್ರ, ನಿರ್ದೇಶಕರಾದ ಎ. ಬಾಲಾಜಿ, ಎನ್. ಹರೀಶ್, ಎನ್. ಶ್ರೀನಿವಾಸಬಾಬು, ಜಿ. ಶ್ರೀನಿವಾಸ್, ಜಿ.ಎ. ವಿಶ್ವನಾಥ್, ಜಿ.ಎಸ್. ಪ್ರಸನ್ನಕುಮಾರ್, ಎಂ.ಆರ್. ವೇಣು, ಕೆ.ಎ. ನಾಗಭೂಷಣ್, ಎಸ್. ಲಿಂಗೇಶ್, ಎಸ್. ಅನಿತಾ ಶ್ರೀಧರ್, ಪ್ರಿಯಾಂಕಾ ಆರ್. ನಾಥ್, ವ್ಯವಸ್ಥಾಪಕ ವಿ.ಎಸ್. ಸಿದ್ದೇಶ್ ಹಾಜರಿದ್ದರು.

# ಕೆಎಂಎಫ್‌ನ ರೈತ ತರಬೇತಿ ಹಣ ಸ್ವಂತ ಖಾತೆಗೆ ವರ್ಗಾಯಿಸಿಕೊಂಡ ಸಿಬ್ಬಂದಿ ಅಮಾನತು ಮೈಸೂರು ತರಬೇತಿ ಕೇಂದ್ರದಲ್ಲಿ ಪ್ರಕರಣ, 60 ಲಕ್ಷ ದುರ್ಬಳಕೆ ಬಯಲು

ಬೆಂಗಳೂರು: ರೈತರು ಹಾಗೂ ಹಾಲು ಉತ್ಪಾದಕ ಸಹಕಾರ ಸಂಘಗ ಸದಸ್ಯರು, ಸಿಬ್ಬಂದಿಗೆ ತರಬೇತಿ ನೀಡುವ ಕರ್ನಾಟಕ ಹಾಲು ಮಹಾಮಂಡಲ( ಇಟಜಿ) ಮೈಸೂರು ತರಬೇತಿ ಕೇಂದ್ರದಲ್ಲಿ ಕಚೇರಿ ಲೆಕ್ಕ ಸಹಾಯಕ 60 ಲಕ್ಷ ಸ್ವಂತ ಖಾತೆಗೆ ಹಾಕಿಕೊಂಡು ದುರ್ಬಳಕೆ ಮಾಡಿಕೊಂಡಿರುವುದು ಪತ್ತೆಯಾಗಿದೆ.

ಬ್ಯಾಂಕ್‌ನವರು ನೀಡಿದ ಮಾಹಿತಿ ಆಧರಿಸಿ ಎಚ್ಚೆತ್ತು–ಕೊಂಡು ಕರ್ನಾಟಕ ಹಾಲು ಮಹಾಮಂಡಲದ ಹಿರಿಯ ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಂಡು ಸಿಬ್ಬಂದಿಯಿಂದ ಹಣವನ್ನು ಹಿಂದಕ್ಕೆ ಪಡೆಯಲಾಗಿದೆ. ಅಲ್ಲದೇ ಸಿಬ್ಬಂದಿ ಅಮಾನತುಗೊಳಿಸಲಾಗಿದ್ದು, ವಜಾಕ್ಕೂ ಪರಿಶೀಲಿಸಲಾಗುತ್ತಿದೆ.

ಆಗಸ್ಟ್ 7ರ ಸಂಜೆ ಕೆಲಸ ಮುಗಿಸಿ ಹೋಗಿದ್ದ ಕೆಎಂಎಫ್ ಮೈಸೂರು ತರಬೇತಿ ಕೇಂದ್ರದ ಕಚೇರಿ ಸಹಾಯಕ( ದರ್ಜೆ1) ರಾಜಶೇಖರ್ ಎಂಬುವವರು ಸುಮಾರು 60 ಲಕ್ಷಗಳನ್ನು ಹಂತಹಂತವಾಗಿ ತಮ್ಮ ಖಾತೆಗೆ ವರ್ಗಾಯಿಸಿಕೊಂಡಿದ್ದರು. ಮರು ದಿನ ಬೆಳಿಗ್ಗೆ ಮೊತ್ತ ವರ್ಗಾವಣೆಯಾಗಿದ್ದನ್ನು ಗಮನಿಸಿದ್ದ ಕೆನರಾ ಬ್ಯಾಂಕ್ ಅಧಿಕಾರಿಗಳು ಕೆಎಂಎಫ್ ಬೆಂಗಳೂರು ಕಚೇರಿ ಗಮನಕ್ಕೆ ತಂದಿದ್ದರು.

ಇದಾದ ಬಳಿಕೆ ಮಾಹಿತಿ ಕಲೆಹಾಕಿದಾಗ ರಾಜಶೇಖರ್ ತಮ್ಮ ಖಾತೆಗೆ ವರ್ಗಾವಣೆ ಮಾಡಿಕೊಂಡಿದ್ದು ಪತ್ತೆಯಾಗಿತ್ತು. ಹಂತ ಹಂತವಾಗಿ ಈ ಮೊತ್ತವನ್ನು ವರ್ಗಾಯಿಸಿಕೊಂಡಿರುವುದು ತಿಳಿದುಬಂದಿತ್ತು. ಈ ಮೊತ್ತವನ್ನು ಹಿಂದಕ್ಕೆ ಪಡೆಯಲಾಗಿತ್ತು.

ಕಚೇರಿ ಸಹಾಯಕರಿಗೆ ಆರ್ಥಿಕ ವಿಭಾಗದಿಂದಲೇ ವಹಿವಾಟು ನಡೆಸಲು ಅನುಮತಿ ನೀಡಲಾಗುತ್ತಿರುತ್ತದೆ.



ಅವರಿಗೆ ಮೊಬೈಲ್ ಅನ್ನು ನೀಡಿದ್ದು ಒಟಿಪಿ ಬರುವ ವ್ಯವಸ್ಥೆ ಇರುತ್ತದೆ. ತಮಗೆ ನೀಡಿರುವ ಅಧಿಕಾರವನ್ನು ಅವರು ದುರುಪಯೋಗಪಡಿಸಿಕೊಂಡಿರುವುದ ು ಖಚಿತವಾಗಿರುವ ಹಿನ್ನೆಲೆಯಲ್ಲಿ ಅಮಾನತು ಕೂಡ ಮಾಡಲಾಗಿದೆ ಎಂದು ಕೆಎಂಎಫ್ ಹಿರಿಯ ಅಧಿಕಾರಿಯೊಬ್ಬರು ಖಚಿತಪಡಿಸಿದರು.

ಈ ಕುರಿತು ಮೈಸೂರಿನ ಪೊಲೀಸ್ ಠಾಣೆಯಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ. ಹಿರಿಯ ಅಧಿಕಾರಿಗಳು ತನಿಖೆ ಕೈಗೊಂಡಿದ್ದು, ವರದಿ ಬಂದ ನಂತರ ವಜಾ ಪ್ರಕ್ರಿಯೆ ಆರಂಭಿಸಲಾಗುತ್ತದೆ ಎಂದು ಅವರು ಹೇಳಿದರು.

ಕರ್ನಾಟಕದಲ್ಲಿ ಬೆಂಗಳೂರು, ಮೈಸೂರು, ಧಾರವಾಡ, ಕಲಬುರಗಿ ಸಹಿತ ನಾಲ್ಕು ಕಡೆ ತರಬೇತಿ ಕೇಂದ್ರಗಳಿವೆ. ಇಲ್ಲಿ ನಿತ್ಯ ರೈತರು, ಹಾಲು ಉತ್ಪಾದಕರು, ಸಿಬ್ಬಂದಿಗೆ ತರಬೇತಿಗಳನ್ನು ಆಯೋಜಿಸಲಾಗುತ್ತದೆ. ಊಟ, ವಸತಿ ಸಹಿತ ನಾನಾ ಖರ್ಚಿಗೆಂದು ಹಣವನ್ನು ತರಬೇತಿ ಕೇಂದ್ರಗಳಿಗೆ ಹಂಚಿಕೆ ಮಾಡಲಾಗುತ್ತದೆ. ಕಚೇರಿಯ ಅಧಿಕಾರಿಗಳು ಹಾಗೂ ಕೆಲ ಸಿಬ್ಬಂದಿಗೆ ಮಾತ್ರ ಇದರ ಬಳಕೆ ಅಧಿಕಾರವಿದೆ. ಇದೇ ಹಣ ಈಗ ದುರುಪಯೋಗವಾಗಿದೆ ಎನ್ನುವುದು ಅಧಿಕಾರಿ ವಿವರಣೆ.

ಕರ್ನಾಟಕ ಹಾಲು ಮಹಾಮಂಡಳವು ವಾರ್ಷಿಕವಾಗಿ 25 ಸಾವಿರ ಕೋಟಿ ವರೆಗೂ ವಹಿವಾಟು ನಡೆಸುತ್ತಿದ್ದು., ಪ್ರತಿ ನಿತ್ಯ 100 ಕೋಟಿವರೆಗೂ ವಹಿವಾಟು ಇರಲಿದೆ, ಹಣಕಾಸು ಸಾಕಷ್ಟು ಸುಧಾರಣಾ ಕ್ರಮಗಳನ್ನು ಕೈಗೊಂಡಿದ್ದರೂ ಕೆಲವೊಮ್ಮೆ ದುರ್ಬಳಕೆ ಆಗುವುದುಂಟು. ಹಿಂದೊಮ್ಮೆ ಬಳ್ಳಾರಿ ಹಾಲು ಒಕ್ಕೂಟದಲ್ಲಿ ವಿಮೆ ಹಣವನ್ನು ದುರ್ಬಳಕೆ ಮಾಡಿಕೊಂಡಿದ್ದ ಪ್ರಕರಣವೂ ನಡೆದು ಕ್ರಮವನ್ನು ಕೈಗೊಳ್ಳಲಾಗಿತ್ತು ಎಂದು ತಿಳಿಸಿದರು

# ಮತದಾರರಿಗೆ ನೆರವಾಗಲು ಬಿಎಲ್‌ಎ ಸಭೆ ಆ. 30ಕ್ಕೆ

ಶಿವಮೊಗ್ಗ: 'ಮತದಾರರ ವಿಶೇಷ ಸಮಗ್ರ ಪರಿಷ್ಕರಣೆಗೆ (ಎಸ್‌ಐಆರ್) ಸಂಬಂಧಿಸಿದಂತೆ ನಗರದ ಮತದಾರರಿಗೆ ಮತ್ತಷ್ಟು ನೆರವು ನೀಡುವ ಉದ್ದೇಶದಿಂದ ಆ. 30ರಂದು ಪೇಸ್ ಕಾಲೇಜಿನ ಸಭಾಂಗಣದಲ್ಲಿ ರಾಷ್ಟ್ರಭಕ್ತರ ಬಳಗದಿಂದ ನಗರದ ಎಲ್ಲಾ 288 ಬೂತ್‌ಗಳ ಬಿಎಲ್‌ಎ ಸಭೆಯನ್ನು ಏರ್ಪಡಿಸಲಾಗಿದೆ' ಎಂದು ರಾಷ್ಟ್ರಭಕ್ತರ ಬಳಗದ ಮುಖ್ಯಸ್ಥ ಕೆ.ಈ.ಕಾಂತೇಶ್ ಹೇಳಿದರು.

'ಎಸ್‌ಐಆರ್ ಪ್ರಕ್ರಿಯೆ ಇದೀಗ ಮುಗಿದಿದೆ. ಆದರೆ ಕರಡು ಮತದಾರರ ಪಟ್ಟಿ ಆ. 24ರಂದು ಪ್ರಕಟಗೊಳ್ಳಲಿದೆ. ಅದರಲ್ಲಿ ಹೆಸರಿಲ್ಲದ ಮತದಾರರನ್ನು ಗುರುತಿಸಿ ಮತ್ತೆ ಮರು ಸೇರ್ಪಡೆಗೊಳಿಸುವ ಕಾರ್ಯ ಆಗಬೇಕಾಗಿದೆ. ಇದಕ್ಕಾಗಿ ರಾಷ್ಟ್ರಭಕ್ತರ ಬಳಗ ಪ್ರತಿ ಬೂತ್‌ಗೆ ತಲಾ ಇಬ್ಬರು ಮಹಿಳೆ ಮತ್ತು ಪುರುಷ ಕಾರ್ಯಕರ್ತರನ್ನು ಗುರುತಿಸಿದೆ. ಅವರಿಗೆ ಸೂಕ್ತ ಸಲಹೆ ನೀಡಿ ತರಬೇತಿಗೊಳಿಸಬೇಕು. ಈ ಹಿನ್ನೆಲೆಯಲ್ಲಿ ಬಿಎಲ್‌ಎ ಸಭೆ ಆಯೋಜಿಸಲಾಗಿದೆ' ಎಂದು ನಗರದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

'ಪ್ರತಿ ಬೂತ್‌ನಲ್ಲಿಯೂ ಇರುವ ನಮ್ಮ ಕಾರ್ಯಕರ್ತರು ಕರಡು ಪ್ರತಿ ಲಭ್ಯವಾದ ಕೂಡಲೇ ಅದರ ಆಧಾರದಲ್ಲಿ ಬಿಎಲ್‌ಒ ಜೊತೆಗೂಡಿ ಪ್ರತಿ ಮನೆಗೂ ಭೇಟಿ ನೀಡಿ ಮತಪಟ್ಟಿಯಿಂದ ಯಾರು ವಂಚಿತರಾಗಿದ್ದಾರೆ. ಅವರನ್ನು ಮರು ಸೇರ್ಪಡೆಗೊಳಿಸಲು ಯಾವ ದಾಖಲೆಗಳು ಬೇಕು ಎಂಬ ವಿವರ ತಿಳಿದು ಅವರಿಗೆ ನೆರವು ನೀಡಿ ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ಬೇಕಾದ ದಾಖಲೆ ಮತ್ತು ಅನುಸರಿಸಬೇಕಾದ ನಿಯಮಗಳ ಬಗ್ಗೆ ತಿಳಿಸಿಕೊಡಲಿದ್ದಾರೆ. ಇದು ಅರ್ಹ ಮತದಾರರು ಪಟ್ಟಿಯಿಂದ ಕೈಬಿಟ್ಟು ಹೋಗದಂತೆ ಸೇರ್ಪಡೆಗೊಳಿಸಲು ಅನುಕೂಲವಾಗುತ್ತದೆ' ಎಂದು ಹೇಳಿದರು.

'ಈಗಾಗಲೇ ರಾಜ್ಯದಲ್ಲಿ 5,54,32,314 ಮತದಾರರಲ್ಲಿ 1,08,75,304 ಮತಗಳನ್ನು ಪಟ್ಟಿಯಿಂದ ತೆಗೆದು ಹಾಕಲಾಗಿದೆ. ಹಾಗೇ ಶಿವಮೊಗ್ಗ ನಗರದಲ್ಲಿಯೂ ಕೂಡ 2,77,098 ಮತಗಳಿದ್ದು, ಈಗ 56,463 ಮತಗಳನ್ನು ಪಟ್ಟಿಯಿಂದ ಕೈ ಬಿಡಲಾಗಿದೆ. ಇದರಲ್ಲಿ ಮೃತಪಟ್ಟವರು, ಸ್ಥಳಾಂತರಗೊಂಡವರು, ಎರಡೂ ಕಡೆ ಇರುವವರು ಇದ್ದಾರೆ. ಇದನ್ನೆಲ್ಲಾ ತೆಗೆದರೆ ಇನ್ನು ಅರ್ಹ ಮತದಾರರು ಇರುತ್ತಾರೆ. ಅವರನ್ನು ಪಟ್ಟಿಗೆ ಸೇರ್ಪಡೆಗೊಳಿಸುವ ಕಾರ್ಯ ರಾಷ್ಟ್ರಭಕ್ತರ ಬಳಗ ಮಾಡುತ್ತಿದೆ' ಎಂದರು

# ಮಾಜಿ ಸಚಿವ ಬಿ.ಸಿ ನಾಗೇಶ್ ನಿಧನಕ್ಕೆ ವಿಧಾನ ಪರಿಷತ್‌ನಲ್ಲಿ ಸಂತಾಪ



ಬೆಂಗಳೂರು: ಮಾಜಿ ಸಚಿವ ಬಿ.ಸಿ ನಾಗೇಶ್ ಅವರ ನಿಧನಕ್ಕೆ ವಿಧಾನ ಪರಿಷತ್‌ನಲ್ಲಿ ಸಂತಾಪ ಸೂಚಿಸಲಾಯ್ತು. ಕಲಾಪ ಪ್ರಾರಂಭ ಆದ ಕೂಡಲೇ ಸಭಾಪತಿ ಸಲೀಂ ಅಹಮದ್ ಸಂತಾಪ ಸೂಚನೆ ಮಂಡನೆ ಮಾಡಿದ್ರು. ಸಭಾನಾಯಕ ಯತೀಂದ್ರ ಸಿದ್ದರಾಮಯ್ಯ , ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸಂತಾಪ ಸೂಚಿಸಿದರು.

ಡಿಸಿಎಂ ಪರಮೇಶ್ವರ್ ಮಾತಾಡಿ, ಬಿ.ಸಿ.ನಾಗೇಶ್ ಅವರು ನನಗೆ ಆತ್ಮೀಯ ಸ್ನೇಹಿತರು. ಶಾಸಕರಾಗಿ, ಸಚಿವರಾಗಿ ಉತ್ತಮ ಕೆಲಸಗಳನ್ನು ಮಾಡಿದ್ದಾರೆ. ಸಚಿವರಾಗಿದ್ದ ವೇಳೆ ಜಿಲ್ಲೆಯ ಅಭಿವೃದ್ಧಿಯ ವಿಚಾರವಾಗಿ ನನಗೆ ಕರೆ ಮಾಡಿ ಸಲಹೆ ಪಡೆಯುತ್ತಿದ್ದರು. 1994ರಲ್ಲಿ ಮಧುಗಿರಿ ವಿಧಾನಸಭಾ ಕ್ಷೇತ್ರದಲ್ಲಿ ನಾನು ಸೋತಾಗ, ಖುದ್ದು ನನ್ನ ಮನೆಗೆ ಬಂದು ಭೇಟಿ ಮಾಡಿದ್ದರು.

ತಾವು ಬಿಜೆಪಿ ಸೇರಬೇಕು. ನಿಮ್ಮನ್ನು ಚೆನ್ನಾಗಿ ನೋಡಿಕೊಳ್ಳುತ್ತೇವೆ ಎಂದು ಒತ್ತಾಯಿಸಿದ್ದರು. ನನಗೆ ಅನಂತ್ ಕುಮಾರ್ ಅವರು ಹೇಳಿ ಕಳಿಸಿದ್ದಾರೆ. ಹೇಗಾದರೂ ಮಾಡಿ ಪರಮೇಶ್ವರ್ ಅವರ ಮನವೊಲಿಸಿ. ಅಡ್ವಾಣಿ ಅವರು ತುಮಕೂರಿಗೆ ಬರುತ್ತಿದ್ದು, ಪರಮೇಶ್ವರ್ ಅವರಿಗೆ ಟಿಕೆಟ್ ಘೋಷಿಸೋಣ ಎಂದಿದ್ದಾರೆ ಎಂಬ ವಿಷಯವನ್ನು ನನ್ನ ಮುಂದೆ ಪ್ರಸ್ತಾಪಿಸಿದ್ದರು. ಇದಕ್ಕೆ ನಾನು ಒಪ್ಪಲಿಲ್ಲ ಎಂದು ಹಳೇ ವಿಚಾರವನ್ನು ನೆನೆದರು.

ನಾಗೇಶ್ ಅವರು ಆಗಿನ ಕಾಲದಲ್ಲೇ ತಿಪಟೂರಿನಲ್ಲಿ ಸಾಹುಕಾರರು ಆಗಿದ್ದರು. ಸಾರ್ವಜನಿಕ ಬದುಕಿನಲ್ಲಿ ಕೆಲಸ ಮಾಡುವ ಅವಶ್ಯಕತೆಯೂ ಇರಲಿಲ್ಲ. ಆದರೂ, ಜನರ ಸೇವೆಯಲ್ಲಿ ತೊಡಗಿಸಿಕೊಂಡಿದ್ದರು. ನಾಗೇಶ್ ಅತ್ಯಂತ ಪ್ರಾಮಾಣಿಕ ವ್ಯಕ್ತಿ. ಸಚಿವರಾಗಿ ಒಳ್ಳೆಯ ಕೆಲಸ ಮಾಡಿದ್ದಾರೆ. ಪಕ್ಷಬೇಧ ಮರೆತು ಹಿರಿಯರನ್ನು ಗೌರವದಿಂದ ಮಾತನಾಡಿಸುತ್ತಿದ್ದರು ಅಂತ ತಿಳಿಸಿದರು.

# 3ನೇ ಮಗು ಹೊಂದುವ ಸರ್ಕಾರಿ ಮಹಿಳಾ ಉದ್ಯೋಗಿಗಳಿಗೆ ಒಂದು ವರ್ಷ ಮಾತೃತ್ವ ರಜೆ

ಚೆನ್ನೈ: ಮೂರನೇ ಮಗು ಹೊಂದುವ ಸರ್ಕಾರಿ ಮಹಿಳಾ ಉದ್ಯೋಗಿಗಳಿಗೆ ವೇತನ ಸಹಿತ ಒಂದು ವರ್ಷ ಮಾತೃತ್ವ ರಜೆ ನೀಡುವ ತಮಿಳುನಾಡು ಸರ್ಕಾರದ ನಿರ್ಧಾರ ಈಗ ವ್ಯಾಪಕ ಚರ್ಚೆಗೆ ಕಾರಣವಾಗಿದೆ. ಸರ್ಕಾರದ ಈ ನಿರ್ಧಾರಕ್ಕೆ ಜನಸಂಖ್ಯಾತಜ್ಞರು, ಕೆಲ ರಾಜಕಾರಣಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

'ವೇತನ ಸಹಿತ ಒಂದು ವರ್ಷ ಮಾತೃತ್ವ ರಜೆ ನೀಡುವಂತಹ ನಿರ್ಧಾರಗಳ ಮೂಲಕ ಮೂರನೇ ಮಗು ಹೊಂದುವುದಕ್ಕೆ ಸರ್ಕಾರ ಪ್ರೋತ್ಸಾಹ ನೀಡುತ್ತಿದೆ. ಇಂತಹ ನಡೆ–ಯು ಜನಸಂಖ್ಯಾ ಸ್ಫೋಟದೊಂದಿಗೆ ತಳುಕು ಹಾಕಿಕೊಂಡಿರುವ ಸಾಮಾಜಿಕ ಆರ್ಥಿಕ ಸಮಸ್ಯೆಗಳನ್ನು ಕಡೆಗಣಿಸುತ್ತದೆ' ಎಂದು ಪಾಪ್ಯುಲೇಷನ್ ಫೌಂಡೇಷನ್ ಆಫ್ ಇಂಡಿಯಾ(ಪಿಎಫ್‌ಐ) ಕಾರ್ಯಕಾರಿ ನಿರ್ದೇಶಕಿ ಪೂನಂ ಮುತ್ರೇಜಾ ಹೇಳಿದ್ದಾರೆ.

'ಒಟ್ಟು ಫಲವಂತಿಕೆ ದರದಲ್ಲಿ ಕುಸಿತವಾಗಿರುವುದು, ವಯೋವೃದ್ಧರ ಸಂಖ್ಯೆ ಹೆಚ್ಚುತ್ತಿರುವ ಕುರಿತ ತಮಿಳುನಾಡು ಸರ್ಕಾರದ ಕಳವಳ ನ್ಯಾಯಸಮ್ಮತ. ಆದರೆ, ಮೂರನೇ ಮಗು ಹೊಂದುವುದಕ್ಕೆ ಉತ್ತೇಜಿಸುವ ಇಂಥ ನಡೆ ಸರಿಯಾದ ನಿರ್ಧಾರವಲ್ಲ' ಎಂದಿದ್ದಾರೆ.

ಮಾನವ ಸಂಪನ್ಮೂಲ ನಿರ್ವಹಣೆ ಸಚಿವ ಡಿ.ಶರತ್ ಕುಮಾರ್ ಅವರು ವಿಧಾನಸಭೆಯಲ್ಲಿ ಮಂಗಳವಾರ ಈ ಕುರಿತು ಘೋಷಿಸಿದ್ದಾರೆ.

# ತುಂಗಭದ್ರಾ ಕಾಲುವೆಗಳಿಗೆ ನೀರು ಹರಿಸಲು ಬಿಜೆಪಿ ಒತ್ತಾಯ



ಕಂಪ್ಲಿ: ತುಂಗಭದ್ರಾ ಕಾಲುವೆಗಳಿಗೆ ಸಮರ್ಪಕ ನೀರು ಹರಿಸುವಂತೆ ಒತ್ತಾಯಿಸಿ ಮಂಡಲ ಬಿಜೆಪಿ ಆಶ್ರಯದಲ್ಲಿ ಸ್ಥಳೀಯ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಯಿತು.

ಮಾಜಿ ಶಾಸಕ ಟಿ.ಎಚ್.ಸುರೇಶ್‌ಬಾಬು ಮಾತನಾಡಿ, ತುಂಗಭದ್ರಾ ಜಲಾಶಯದಲ್ಲಿ 93ಟಿಎಂಸಿ ಅಡಿ ನೀರು ಸಂಗ್ರಹವಿದ್ದರು ಮೇಲ್ಮಟ್ಟ ಮತ್ತು ಕೆಳಮಟ್ಟದ ಕಾಲುವೆಗಳಿಗೆ ನೀರು ಹರಿಸಲು ಸರ್ಕಾರ ಹಿಂದೇಟು ಹಾಕುತ್ತಿದೆ ಎಂದು ದೂರಿದರು. ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಜಲಾಶಯದಲ್ಲಿ 50 ಟಿಎಂಸಿ ಅಡಿ ನೀರು ಸಂಗ್ರಹವಿದ್ದಾಗ ಬೆಳೆಗಳಿಗೆ ಮತ್ತು ಕುಡಿಯಲು ಕಾಲುವೆಗಳಿಗೆ ನೀರು ಹರಿಸಲಾಗಿತ್ತು ಎಂದರು. ಕಾಲುವೆಗಳಿಗೆ ನೀರು ಹರಿಸಲು ಕ್ರಮ ಕೈಗೊಳ್ಳದಿದ್ದಲ್ಲಿ ಆ.19ರಂದು ರೈತರೊಂದಿಗೆ ಪ್ರತಿಭಟನೆ ಮತ್ತು ಮುನಿರಾಬಾದ್ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಲಾಗುವುದು ಎಂದು ಎಚ್ಚರಿಸಿದರು.

ಮಂಡಲ ಅಧ್ಯಕ್ಷ ಸಿ.ಡಿ.ಮಹಾದೇವ, ಪ್ರಮುಖರಾದ ಅಳ್ಳಳ್ಳಿ ವೀರೇಶ್, ಎಸ್. ಎಂ. ನಾಗರಾಜ ಮಾತನಾಡಿದರು. ಕಡೇಮನಿ ಪಂಪಾಪತಿ, ಜಿ.ಲಿಂಗನಗೌಡ, ಎನ್. ಚಂದ್ರಕಾಂತರೆಡ್ಡಿ, ಟಿ.ವಿ.ಸುದರ್ಶನರೆಡ್ಡಿ, ಹೂವಣ್ಣ, ಕರಿಬಸಯ್ಯ ಇದ್ದರು.

# ಸಿಗಂದೂರು ಬಳಿಯ ಹೋಟೇಲ್ ಕೆಲಸದಾಕೆ ಮೇಲೆ ಹಲ್ಲೆ, ಯುವಕನ ವಿರುದ್ಧ ಪ್ರಕರಣ

ತುಮರಿ: ಸಮೀಪದ ಕಳಸವಳ್ಳಿ ಗ್ರಾಮದ ಸಿಗಂದೂರು ಬಳಿಯ ಹೋಟೆಲ್‌ವೊಂದರಲ್ಲಿ ಕೆಲಸದಾಕೆ ಮೇಲೆ ಹಲ್ಲೆ ನಡೆಸಿದ ಆರೋಪದಡಿ ಯುವಕನೊಬ್ಬನ ವಿರುದ್ಧ ಇಲ್ಲಿನ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹಾವೇರಿ ಮೂಲದ ಮಹಿಳೆಯೊಬ್ಬರು ಈ ಹೋಟೆಲ್‌ನಲ್ಲಿ ಕೆಲಸ ಮಾಡುತ್ತಿದ್ದರು. ಆ. 15ರಂದು ಕೆಲಸ ಮಾಡುತ್ತಿದ್ದ ವೇಳೆ ಬಂದ ಆರೋಪಿ ಬಾರಂಗಿ ಹೋಬಳಿಯ ಕಡಕೋಡು ಗ್ರಾಮದ ನಿವಾಸಿ ಶಿವರಾಜ್ (30), ಮಹಿಳೆಗೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾನೆ.

ಅಲ್ಲದೆ ಆಕೆಯ ಮೇಲೆ ಹಲ್ಲೆ ನಡೆಸಿ, ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಈ ಸಂಬಂಧ ಕಾರ್ಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಆರೋಪಿಯ ಪತ್ತೆಗೆ ಪೊಲೀಸರು ಜಾಲ ಬೀಸಿದ್ದಾರೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.